ಸಂಪುಟ : 11 ಸಂಚಿಕೆ: 115 ಪುಟ : 4+2 ಬೆಲೆ: 3.00 ರವಿವಾರ ಜೂನ್ 07 2026 Mob : 9448326533- 9019256545 ಗದಗ

ಸಂಪಾದಕರು : ಎಚ್.ಎಮ್. ಶರೀಫನವರ್

# ವಿಜಯ ಸಾಕ್ಷಿ

ವಾಸ್ತವ, ವಸ್ತುನಿಷ್ಠ, ವಿಭಿನ್ನ... VIJAYASAKSHI KANNADA DAILY ಕನ್ನಡ ದಿನಪತ್ರಿಕೆ




Volume : 11 Issue : 115 Pages : 4+2 Price : 3.00 Sunday june 07 2026 Gadag RNINo:KARKAN/2015/63412 E-mail: vijayasakshidaily@gmail.com Post Regn.No:GDG/72/2023-25

ಎಚ್.ಕೆ. ಪಾಟೀಲರಿಗೆ ಸಚಿವ ಸ್ಥಾನ ಸಿಗದಿದ್ದಕ್ಕೆ ಆಸೀಫ್ ದಂಡಿನ ಆಕ್ರೋಶ

## ಉತ್ತರ ಕರ್ನಾಟಕದ ಧ್ವನಿಯನ್ನೇ ಅಡಗಿಸಿದ್ರಾ?



■ವಿಜಯಸಾಕ್ಷಿ ಸುದ್ದಿ, ಗದಗ

ಹಿರಿಯ ರಾಜಕಾರಣಿ ಎಚ್.ಕೆ. ಪಾಟೀಲ ಅವರನ್ನು ಸಚಿವ ಸಂಪುಟದಲ್ಲಿ ಸಮರ್ಪಕವಾಗಿ ಪರಿಗಣಿಸದಿರುವುದು ಉತ್ತರ ಕರ್ನಾಟಕದ ಜನತೆಗೆ ಮಾಡಿದ ಅನ್ಯಾಯವಾಗಿದೆ ಎಂದು ಅಂಜುಮನ್–ಎ–ಇಸ್ಲಾಂ ಸಂಸ್ಥೆ ಸದಸ್ಯ ಆಸೀಫ್ ಜಿ. ದಂಡಿನ ಅಸಮಾಧಾನ ವ್ಯಕ್ತಪಡಿಸಿದ್ದಾರೆ.

ಈ ಕುರಿತು ಪ್ರಕಟಣೆ ನೀಡಿರುವ ಅವರು, ಕರ್ನಾಟಕ ರಾಜಕೀಯದಲ್ಲಿ ಸ್ವಚ್ಛ ರಾಜಕಾರಣ, ಆಡಳಿತಾತ್ಮಕ ಅನುಭವ ಹಾಗೂ ಜನಪರ ಬದ್ಧತೆಗೆ ಹೆಸರಾಗಿರುವ ಎಚ್.ಕೆ. ಪಾಟೀಲ ಅವರನ್ನು ಸಚಿವ ಸಂಪುಟ ರಚನೆ ವೇಳೆ ಕಡೆಗಣಿಸಿರುವುದು ಉತ್ತರ ಕರ್ನಾಟಕದ ಜನರಲ್ಲಿ ತೀವ್ರ ನಿರಾಸೆ ಮೂಡಿಸಿದೆ ಎಂದು ತಿಳಿಸಿದ್ದಾರೆ.

ದಶಕಗಳ ಕಾಲ ಶಾಸಕರಾಗಿ ಹಾಗೂ ವಿವಿಧ ಇಲಾಖೆಗಳ ಸಚಿವರಾಗಿ ಸೇವೆ ಸಲ್ಲಿಸಿರುವ ಎಚ್.ಕೆ. ಪಾಟೀಲ ಅವರು ನೀರಾವರಿ, ಗ್ರಾಮೀಣಾಭಿವೃದ್ಧಿ, ಪಂಚಾಯತ್ ರಾಜ್, ಕಾನೂನು ಹಾಗೂ ಸಂಸದೀಯ ವ್ಯವಹಾರಗಳಂತಹ ಪ್ರಮುಖ ಕ್ಷೇತ್ರಗಳಲ್ಲಿ ಮಹತ್ವದ ಕೊಡುಗೆ ನೀಡಿದ್ದಾರೆ ಎಂದು ಹೇಳಿದರು.

ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರಾಗಿದ್ದ ಅವಧಿಯಲ್ಲಿ ಕರ್ನಾಟಕ ರಾಷ್ಟ್ರೀಯ ಮಟ್ಟದಲ್ಲಿ ಹಲವು ಪ್ರಶಸ್ತಿಗಳನ್ನು ಪಡೆದು ದೇಶದ ಗಮನ ಸೆಳೆದಿತ್ತು ಎಂದು ಉಲ್ಲೇಖಿಸಿದರು.

ಎಚ್.ಕೆ. ಪಾಟೀಲ ಅವರು ಉತ್ತರ ಕರ್ನಾಟಕದ ಧ್ವನಿಯಾಗಿ, ರೈತರ ಹಿತಾಸಕ್ತಿಗಳ ಪರ ಹೋರಾಟಗಾರರಾಗಿ ಹಾಗೂ ಆಡಳಿತದಲ್ಲಿ ಪಾರದರ್ಶಕತೆ ಪ್ರತಿಪಾದಿಸಿದ ನಾಯಕರಾಗಿ ಗುರುತಿಸಿಕೊಂಡಿದ್ದಾರೆ. ಅವರ ಅನುಭವ ಹಾಗೂ ಸಾಮರ್ಥ್ಯ ರಾಜ್ಯದ ಅಭಿವೃದ್ಧಿಗೆ ಅಮೂಲ್ಯ ಸಂಪತ್ತಾಗಿದೆ ಎಂದು ಹೇಳಿದರು.

ರಾಜ್ಯ ಆಡಳಿತದಲ್ಲಿ ಪ್ರಾದೇಶಿಕ ಸಮತೋಲನ, ಅನುಭವ ಹಾಗೂ ಜನಪ್ರತಿನಿಧಿತ್ವಕ್ಕೆ ಸೂಕ್ತ ಗೌರವ ದೊರೆಯಬೇಕು. ಮುಖ್ಯಮಂತ್ರಿ ಹಾಗೂ ಪಕ್ಷದ ಹೈಕಮಾಂಡ್ ಜನರ ಭಾವನೆಗಳನ್ನು ಗೌರವಿಸಿ ಎಚ್.ಕೆ. ಪಾಟೀಲ ಅವರ ಅನುಭವವನ್ನು ಸಮರ್ಪಕವಾಗಿ ಬಳಸಿಕೊಳ್ಳಬೇಕು ಎಂದು ಒತ್ತಾಯಿಸಿದರು.

> "ಎಚ್.ಕೆ. ಪಾಟೀಲರಂತಹ ಹಿರಿಯ ನಾಯಕರು ಸರ್ಕಾರದ ಬಲ. ಅವರ ಅನುಭವಕ್ಕೆ ಸೂಕ್ತ ಸ್ಥಾನ ದೊರೆತಾಗ ಮಾತ್ರ ಆಡಳಿತ ಇನ್ನಷ್ಟು ಸಮರ್ಥವಾಗಲಿದೆ."
>
> **–ಆಸೀಫ್ ಜಿ. ದಂಡಿನ,** ಸದಸ್ಯ, ಅಂಜುಮನ್–ಎ–ಇಸ್ಲಾಂ ಸಂಸ್ಥೆ ಗದಗ–ಬೆಟಗೇರಿ

---

ದೇವಸ್ಥಾನಗಳಲ್ಲಿ ವಿಶೇಷ ಪೂಜೆ ಸಲ್ಲಿಸಿದ ಕಾರ್ಯಕರ್ತರು। ಹೈಕಮಾಂಡ್‌ಗೆ ಮನವಿ– ಹೋರಾಟದ ಎಚ್ಚರಿಕೆ

# ಜಿ.ಎಸ್. ಪಾಟೀಲರಿಗೆ ಸಚಿವ ಸ್ಥಾನಕ್ಕಾಗಿ ಉರುಳು ಸೇವೆ

■ವಿಜಯಸಾಕ್ಷಿ ಸುದ್ದಿ, ನರೇಗಲ್ಲ

ರೋಣ ಕ್ಷೇತ್ರದ ಶಾಸಕ ಜಿ.ಎಸ್. ಪಾಟೀಲರಿಗೆ ಸಚಿವ ಸ್ಥಾನ ನೀಡಬೇಕೆಂದು ಆಗ್ರಹಿಸಿ ನರೇಗಲ್ ಪಟ್ಟಣದಲ್ಲಿ ಕಾಂಗ್ರೆಸ್ ಕಾರ್ಯಕರ್ತರು, ಅಭಿಮಾನಿಗಳು ಹಾಗೂ ಬೆಂಬಲಿಗರು ಶನಿವಾರ ಉರುಳು ಸೇವೆ ಸಲ್ಲಿಸಿ ದೇವರಲ್ಲಿ ವಿಶೇಷ ಪ್ರಾರ್ಥನೆ ಸಲ್ಲಿಸಿದ ಘಟನೆ ರಾಜಕೀಯ ವಲಯದಲ್ಲಿ ಗಮನ ಸೆಳೆದಿದೆ.

ಪಟ್ಟಣದ ಸಂತೆ ಬಜಾರದಲ್ಲಿರುವ ಆಂಜನೇಯ ದೇವಸ್ಥಾನದಿಂದ ಗ್ರಾಮದೇವಿ ದೇವಸ್ಥಾನದವರೆಗೆ ಕಾರ್ಯಕರ್ತರು ಉರುಳು ಸೇವೆ ಸಲ್ಲಿಸಿ, "ಜಿ.ಎಸ್. ಪಾಟೀಲರಿಗೆ ಸಚಿವ ಸ್ಥಾನ ದೊರಕಲಿ" ಎಂದು ಸಂಕಲ್ಪ ಮಾಡಿದರು. ವಿವಿಧ ದೇವಸ್ಥಾನಗಳಲ್ಲಿ ವಿಶೇಷ ಪೂಜೆ ಸಲ್ಲಿಸಿ, ಹರಕೆ ಹೊತ್ತು ಪ್ರಾರ್ಥಿಸಿದರು.

ಈ ವೇಳೆ ಮಾತನಾಡಿದ ನರೇಗಲ್ಲ ಬ್ಲಾಕ್ ಕಾಂಗ್ರೆಸ್ ಅಧ್ಯಕ್ಷ ಶರಣಪ್ಪ ಬೆಟಗೇರಿ, "ಜಿ.ಎಸ್. ಪಾಟೀಲರು ಜಿಲ್ಲೆಯ ಹಿರಿಯ ಶಾಸಕರಾಗಿ ಎಲ್ಲರನ್ನು ಸಮಾನವಾಗಿ ಕರೆದುಕೊಂಡು ಹೋಗಿ ಯಾವುದೇ ಕಪ್ಪು ಚುಕ್ಕೆ ಇಲ್ಲದ ರಾಜಕಾರಣ ಮಾಡಿದ್ದಾರೆ. ಕ್ಷೇತ್ರದಲ್ಲಿ ನಿರಂತರ ಅಭಿವೃದ್ಧಿ ಕಾರ್ಯಗಳನ್ನು ಕೈಗೊಂಡಿದ್ದಾರೆ. ಇಂದಿರಾ ಗಾಂಧಿಯವರೊಂದಿಗೆ ಹೆಜ್ಜೆ ಹಾಕಿದ ಅವರ ಹಿರಿತನ ಹಾಗೂ ಪಕ್ಷಕ್ಕಾಗಿ ದುಡಿದ ಸೇವೆಯನ್ನು ಗುರುತಿಸಿ ಸಚಿವ ಸ್ಥಾನ ನೀಡಬೇಕು. ಇಲ್ಲವಾದರೆ ಹೋರಾಟ ಅನಿವಾರ್ಯ" ಎಂದು ಎಚ್ಚರಿಸಿದರು.



ಯುವ ಮುಖಂಡರಾದ ಸದ್ದಾಂ ನಶೇಖಾನ ಹಾಗೂ ಗುಡದಪ್ಪ ಗೋಡಿ ಮಾತನಾಡಿ, "ನೆಲ–ಜಲ ಅಭಿವೃದ್ಧಿಗಾಗಿ ಸಾವಿರಾರು ಕೆರೆಗಳನ್ನು ನಿರ್ಮಿಸಿ 'ಸಾವಿರ ಕೆರೆಗಳ ಸರದಾರ' ಎಂಬ ಹೆಗ್ಗಳಿಕೆಗೆ ಪಾತ್ರರಾಗಿದ್ದಾರೆ. ರೈತರ ಭೂಮಿ ಉಳಿಸಿ, ಯುವಕರಿಗೆ ಉದ್ಯೋಗ ಕಲ್ಪಿಸಿ, ದೀನ ದಲಿತರು ಹಾಗೂ ಹಿಂದುಳಿದ ವರ್ಗಗಳಿಗೆ ಬದುಕಿನ ದಾರಿ ತೋರಿದ ನಾಯಕರಿಗೆ ಸಚಿವ ಸ್ಥಾನ ನೀಡದೇ ಇರುವುದು ಅನ್ಯಾಯ" ಎಂದು ಆಕ್ರೋಶ ವ್ಯಕ್ತಪಡಿಸಿದರು.

"ಜಿ.ಎಸ್. ಪಾಟೀಲರಿಗೆ ಸಚಿವ ಸ್ಥಾನ ಸಿಗಲಿ ಎಂಬ ಉದ್ದೇಶದಿಂದ ನಮ್ಮೂರಿನ ದೇವರಿಗೆ ಹರಕೆ ಹೊತ್ತು ಉರುಳು ಸೇವೆ ಸಲ್ಲಿಸಿದ್ದೇವೆ. ಈಗಲಾದರೂ ಹೈಕಮಾಂಡ್ ಸರಿಯಾದ ನಿರ್ಧಾರ ಕೈಗೊಳ್ಳಬೇಕು" ಎಂದು ಆಗ್ರಹಿಸಿದರು.

> "ಸಾವಿರ ಕೆರೆಗಳ ಸರದಾರ, ಜನಪರ ನಾಯಕ ಜಿ.ಎಸ್. ಪಾಟೀಲರಿಗೆ ಸಚಿವ ಸ್ಥಾನ ನೀಡದೇ ಇರುವುದು ಕ್ಷೇತ್ರದ ಜನರ ಭಾವನೆಗೆ ಧಕ್ಕೆ. ಈಗಲಾದರೂ ಹೈಕಮಾಂಡ್ ನ್ಯಾಯ ಕೊಡಬೇಕು."
>
> **–ಶರಣಪ್ಪ ಬೆಟಗೇರಿ, ಬ್ಲಾಕ್ ಕಾಂಗ್ರೆಸ್ ಅಧ್ಯಕ್ಷ**

### ಜಿ.ಎಸ್.ಪಿ ಸಚಿವರಾದ್ರೆ 101 ತೆಂಗಿನಕಾಯಿ ಹರಕೆ

1. ಶಾಸಕ ಜಿ.ಎಸ್. ಪಾಟೀಲರಿಗೆ ಸಚಿವ ಸ್ಥಾನ ಸಿಗಲೆಂದು ಅಭಿಮಾನಿಗಳ ವಿಶೇಷ ಸಂಕಲ್ಪ
2. ನರೇಗಲ್ಲ ಗ್ರಾಮದೇವಿ ದುರ್ಗಾದೇವಿಗೆ 101 ತೆಂಗಿನಕಾಯಿ ಒಡೆಯುವ ಹರಕೆ
3. ಸಚಿವ ಸ್ಥಾನಕ್ಕಾಗಿ ಉರುಳು ಸೇವೆ, ಡೊಳ್ಳು ಮಜಲು ಮೂಲಕ ಪ್ರಾರ್ಥನೆ
4. "ಈ ಬಾರಿ ಜಿ.ಎಸ್.ಪಿಗೆ ಸಚಿವ ಸ್ಥಾನ ನೀಡಲೇಬೇಕು" ಎಂದು ಕಾರ್ಯಕರ್ತರ ಆಗ್ರಹ

▶▶3ನೇ ಪುಟಕ್ಕೆ

---

ಲಕ್ಷ್ಮೇಶ್ವರ ಘಟಕಕ್ಕೆ 2ನೂತನ ಬಸ್‌ಗಳಿಗೆ ಶಾಸಕ ಡಾ. ಚಂದ್ರು ಲಮಾಣಿ ಚಾಲನೆ

# ಗ್ರಾಮೀಣ ಭಾಗಕ್ಕೆ ಹೊಸ ಬಸ್ ಬಿಡಿ

■ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ

ಗ್ರಾಮೀಣ ಪ್ರದೇಶದ ವಿದ್ಯಾರ್ಥಿಗಳಿಗೆ ಯಾವುದೇ ರೀತಿಯ ತೊಂದರೆಯಾಗದಂತೆ ಸಮರ್ಪಕ ಬಸ್ ಸಂಚಾರ ವ್ಯವಸ್ಥೆ ಕಲ್ಪಿಸಬೇಕು ಎಂದು ಶಾಸಕ ಡಾ. ಚಂದ್ರು ಲಮಾಣಿ ಸಾರಿಗೆ ಇಲಾಖೆಯ ಅಧಿಕಾರಿಗಳಿಗೆ ಸೂಚಿಸಿದರು.

ಪಟ್ಟಣದ ಕೆಎಸ್‌ಆರ್‌ಟಿಸಿ ಘಟಕಕ್ಕೆ ಸಾರಿಗೆ ಇಲಾಖೆಯಿಂದ ಮಂಜೂರಾದ ಎರಡು ನೂತನ ಬಸ್‌ಗಳಿಗೆ ಶನಿವಾರ ಪೂಜೆ ಸಲ್ಲಿಸಿ ಹಸಿರು ನಿಶಾನೆ ತೋರುವ ಮೂಲಕ ಚಾಲನೆ ನೀಡಿ ಅವರು ಮಾತನಾಡಿದರು.

ಹಳೆಯ ಬಸ್‌ಗಳು ಆಗಾಗ್ಗೆ ಕೆಟ್ಟು ನಿಲ್ಲುತ್ತಿರುವ ಬಗ್ಗೆ ಸಾರ್ವಜನಿಕರಿಂದ ದೂರುಗಳು ಬರುತ್ತಿದ್ದು, ಅದರ ಬಗ್ಗೆ ಇಲಾಖೆ ಹೆಚ್ಚಿನ ನಿಗಾ ವಹಿಸಬೇಕು. ಆದಷ್ಟು ಹೊಸ ಬಸ್‌ಗಳನ್ನು ಗ್ರಾಮೀಣ ಭಾಗಗಳಿಗೆ ಓಡಿಸುವ ವ್ಯವಸ್ಥೆಯಾಗಬೇಕು ಎಂದು ಹೇಳಿದರು.



"ಲಕ್ಷ್ಮೇಶ್ವರ ಸಾರಿಗೆ ಘಟಕಕ್ಕೆ ಇನ್ನಷ್ಟು ಬಸ್‌ಗಳನ್ನು ಮಂಜೂರು ಮಾಡುವಂತೆ ಹಾಗೂ ಬೆಂಗಳೂರಿಗೆ ಎಸಿ ಕೋಚ್ ಬಸ್ ಸೌಲಭ್ಯ ಕಲ್ಪಿಸುವಂತೆ ಇಲಾಖೆಗೆ ಮನವಿ ಮಾಡಲಾಗಿದೆ" ಎಂದು ತಿಳಿಸಿದರು.

ಗ್ಯಾರಂಟಿ ಅನುಷ್ಠಾನ ಸಮಿತಿ ಅಧ್ಯಕ್ಷ ನಾಗರಾಜ ಮಡಿವಾಳರ ಮಾತನಾಡಿ, ಕಾಂಗ್ರೆಸ್ ಸರ್ಕಾರ ಅಧಿಕಾರಕ್ಕೆ ಬಂದ ಬಳಿಕ ಶಕ್ತಿ ಯೋಜನೆಯೊಂದಿಗೆ ಲಕ್ಷ್ಮೇಶ್ವರ ಘಟಕಕ್ಕೆ ಇದುವರೆಗೆ ಸುಮಾರು 16 ನೂತನ ಬಸ್‌ಗಳನ್ನು ಒದಗಿಸಲಾಗಿದೆ ಎಂದು ಹೇಳಿದರು.

ಕಾರ್ಯಕ್ರಮದಲ್ಲಿ ಜಿಪಂ ಮಾಜಿ ಅಧ್ಯಕ್ಷ ಎಸ್.ಪಿ. ಬಳಿಗಾರ, ಘಟಕ ವ್ಯವಸ್ಥಾಪಕಿ ಸವಿತಾ ಆದಿ, ಗ್ಯಾರಂಟಿ ಸಮಿತಿ ಸದಸ್ಯರು, ಇಲಾಖೆಯ ಅಧಿಕಾರಿಗಳು, ಸಿಬ್ಬಂದಿ ಹಾಗೂ ಸಾರ್ವಜನಿಕರು ಉಪಸ್ಥಿತರಿದ್ದರು.

---

ಲಕ್ಕುಂಡಿ ಗ್ರಾಮಸಭೆಯಲ್ಲಿ ಜೆಜೆಎಂ ಕಾಮಗಾರಿ ವಿರುದ್ಧ ಜನರ ಆಕ್ರೋಶ

## ನಾಲ್ಕು ಕೋಟಿ ಖರ್ಚಾದರೂ ನೀರು ಎಲ್ಲಿದೆ?



■ವಿಜಯಸಾಕ್ಷಿ ಸುದ್ದಿ, ಲಕ್ಕುಂಡಿ

ಜಲ ಜೀವನ ಮಿಷನ್ (ಜೆಜೆಎಂ) ಯೋಜನೆಯ ಅಸಮರ್ಪಕ ಕಾಮಗಾರಿ, ಕುಡಿಯುವ ನೀರಿನ ತಾರತಮ್ಯ ಪೂರೈಕೆ ಹಾಗೂ ಗ್ರಾಮ ಅಭಿವೃದ್ಧಿ ವಿಚಾರಗಳು ಲಕ್ಕುಂಡಿ ಗ್ರಾಮ ಪಂಚಾಯಿತಿ ವಿಶೇಷ ಗ್ರಾಮಸಭೆಯಲ್ಲಿ ತೀವ್ರ ಚರ್ಚೆಗೆ ಗ್ರಾಸವಾದವು.

ಅನ್ನದಾನೀಶ್ವರ ಸಭಾಭವನದಲ್ಲಿ ನಡೆದ ಗ್ರಾಮಸಭೆಯಲ್ಲಿ ಮಹಿಳೆಯರು ಹಾಗೂ ಯುವಕರು ಆಕ್ರೋಶ ವ್ಯಕ್ತಪಡಿಸಿ, "ಗ್ರಾಮದ 5 ವಾರ್ಡ್‌ಗಳಿಗೆ ಮಾತ್ರ ಸಮರ್ಪಕ ನೀರು ಪೂರೈಕೆಯಾಗುತ್ತಿದೆ. 6, 7, 8, 9 ಹಾಗೂ 10ನೇ ವಾರ್ಡ್‌ಗಳಿಗೆ 8ರಿಂದ 12 ದಿನಕ್ಕೊಮ್ಮೆ ನೀರು ಬರುತ್ತಿದ್ದು ಜನರು ಹಾಗೂ ಜಾನುವಾರುಗಳು ಸಂಕಷ್ಟ ಅನುಭವಿಸುತ್ತಿವೆ," ಎಂದು ದೂರಿದರು.

ತಾ.ಪಂ ಮಾಜಿ ಅಧ್ಯಕ್ಷ ಎಂ.ಎನ್. ಉಮಚಗಿ ಹಾಗೂ ಎನ್.ಐ. ಕಿರಿಟಗೇರಿ ಮಾತನಾಡಿ, "ಕಾಮಗಾರಿ ಪೂರ್ಣಗೊಂಡಿದೆ ಎಂದು ಹೇಳಲಾಗುತ್ತಿದೆ. ಆದರೆ ನೀರು ಮಾತ್ರ ಬರುತ್ತಿಲ್ಲ. ಸಂಬಂಧಪಟ್ಟ ಇಂಜಿನಿಯರ್ ಹಾಗೂ ಗುತ್ತಿಗೆದಾರರ ವಿರುದ್ಧ ಲೋಕಾಯುಕ್ತಕ್ಕೆ ದೂರು ನೀಡಲಾಗುವುದು," ಎಂದು ಎಚ್ಚರಿಸಿದರು.

ಗ್ರಾಮಸಭೆಯ ಅಧ್ಯಕ್ಷತೆ ವಹಿಸಿದ್ದ ಶರಣು ಗೋಣೇರಿ ಮಾತನಾಡಿ, "101 ದೇವಸ್ಥಾನ ಹಾಗೂ ಭಾವಿಗಳನ್ನು ಹೊಂದಿರುವ ಲಕ್ಕುಂಡಿಯನ್ನು ವಿಶ್ವ ಪರಂಪರೆ ಪಟ್ಟಿಗೆ ಸೇರಿಸಲು ಶಾಸಕ ಎಚ್. ಕೆ. ಪಾಟೀಲ ಹಾಗೂ ಶಾಸಕ ಸಿ. ಸಿ. ಪಾಟೀಲ ಶ್ರಮಿಸುತ್ತಿದ್ದಾರೆ. ಗ್ರಾಮವನ್ನು ಸ್ವಚ್ಛ ಹಾಗೂ ಸುಂದರವಾಗಿ ಉಳಿಸಿ ಪ್ರವಾಸಿಗರನ್ನು ಸೆಳೆಯಲು ಗ್ರಾಮಸ್ಥರು ಸಹಕರಿಸಬೇಕು," ಎಂದು ಮನವಿ ಮಾಡಿದರು.

### ಜೆಜೆಎಂ ಯೋಜನೆ ವಿರುದ್ಧ ಗರಂ

ಸುಮಾರು ₹4 ಕೋಟಿ ವೆಚ್ಚದಲ್ಲಿ ಪೂರ್ಣಗೊಂಡಿದೆ ಎನ್ನಲಾಗುತ್ತಿರುವ ಜೆಜೆಎಂ ಕಾಮಗಾರಿಯಲ್ಲೂ ಇದುವರೆಗೂ ನೀರು ಪೂರೈಕೆ ಆರಂಭವಾಗಿಲ್ಲ ಎಂದು ಗ್ರಾಮಸ್ಥರು ಆಕ್ರೋಶ ವ್ಯಕ್ತಪಡಿಸಿದರು.

### ವಾಲ್‌ಮನ್‌ಗೆ ಆಡಳಿತಾಧಿಕಾರಿ ತರಾಟೆ

ಈ ವೇಳೆ ನೀರು ಪೂರೈಕೆ ಮಾಡುತ್ತಿರುವ ವಾಲ್‌ಮನ್‌ರನ್ನು ಸಭೆಗೆ ಕರೆಯಿಸಿದ ಆಡಳಿತಾಧಿಕಾರಿ ಹಾಗೂ ಲಕ್ಕುಂಡಿ ಪಾರಂಪರಿಕ ಪ್ರದೇಶ ಅಭಿವೃದ್ಧಿ ಪ್ರಾಧಿಕಾರದ ಆಯುಕ್ತ ಶರಣು ಗೋಣೇರಿ, "ಸಮರ್ಪಕ ನೀರು ಪೂರೈಕೆಗೆ ಅಗತ್ಯ ಸಂಪನ್ಮೂಲ ಒದಗಿಸಲಾಗುತ್ತಿದೆ. ಸಮಸ್ಯೆಗಳನ್ನು ತಕ್ಷಣ ಗಮನಕ್ಕೆ ತರಬೇಕು. ನಿರ್ಲಕ್ಷ್ಯ ವಹಿಸಿದರೆ ಕ್ರಮ ಅನಿವಾರ್ಯ," ಎಂದು ಎಚ್ಚರಿಕೆ ನೀಡಿದರು.

▶▶2ನೇ ಪುಟಕ್ಕೆ

---

ಸರ್ಕಾರದ ದಂಡದ ಬರೆ, ಉತ್ಪಾದನಾ ವೆಚ್ಚ ಏರಿಕೆಯಿಂದ ಕ್ರಷರ್ ಮಾಲೀಕರ ಕಿಡಿ

# ಜಲ್ಲಿ ದರ ಏರಿಕೆ ಅನಿವಾರ್ಯ!

■ವಿಜಯಸಾಕ್ಷಿ ಸುದ್ದಿ, ಗದಗ

ರಾಜ್ಯ ಸರ್ಕಾರದ ಭಾರಿ ದಂಡದ ಬರೆ, ಉತ್ಪಾದನಾ ವೆಚ್ಚದ ಏರಿಕೆ ಹಾಗೂ ಗಣಿಗಾರಿಕೆ ಕ್ಷೇತ್ರದ ಮೇಲಿನ ಕಠಿಣ ನಿಯಮಗಳಿಂದ ಸಂಕಷ್ಟಕ್ಕೆ ಸಿಲುಕಿರುವ ಕ್ರಷರ್ ಉದ್ಯಮಿಗಳು ಜಲ್ಲಿ ಹಾಗೂ ಇತರೆ ನಿರ್ಮಾಣ ಸಾಮಗ್ರಿಗಳ ದರ ಹೆಚ್ಚಳಕ್ಕೆ ತೀರ್ಮಾನಿಸಿದ್ದಾರೆ.

ನಗರದ ಪತ್ರಿಕಾ ಭವನದಲ್ಲಿ ಶನಿವಾರ ನಡೆದ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಗದಗ ಜಿಲ್ಲಾ ಕ್ವಾರಿ ಅಂಡ್ ಸ್ಟೋನ್ ಕ್ರಷರ್ ಮಾಲೀಕರ ಸಂಘದ ಅಧ್ಯಕ್ಷ ಆರ್.ಸಿ. ಕಾಮಾಜಿ, "ಪೆಟ್ರೋಲ್, ಡೀಸೆಲ್, ವಿದ್ಯುತ್, ಕಾರ್ಮಿಕರ ವೇತನ ಸೇರಿದಂತೆ ಉತ್ಪಾದನಾ ವೆಚ್ಚ ಗಣನೀಯವಾಗಿ ಏರಿಕೆಯಾಗಿದೆ. ಇದರ ಜತೆಗೆ ಸರ್ಕಾರ ವಿಧಿಸುತ್ತಿರುವ ಕೋಟ್ಯಂತರ ರೂಪಾಯಿ ದಂಡ ಉದ್ಯಮದ ಬೆನ್ನೆಲುಬೇ ಮುರಿಯುವಂತಾಗಿದೆ" ಎಂದು ಆಕ್ರೋಶ ವ್ಯಕ್ತಪಡಿಸಿದರು.



ಕರ್ನಾಟಕದಲ್ಲಿ ದೇಶದ ಬೇರೆ ಯಾವುದೇ ರಾಜ್ಯದಲ್ಲಿಲ್ಲದಷ್ಟು ಕಠಿಣ ಕಾನೂನುಗಳನ್ನು ಜಾರಿಗೊಳಿಸಿ ಗಣಿಗಾರಿಕೆ ಉದ್ಯಮಿಗಳಿಗೆ ಕಿರುಕುಳ ನೀಡಲಾಗುತ್ತಿದೆ.

> "ಸರ್ಕಾರದ ಭಾರಿ ದಂಡ, ಡೀಸೆಲ್–ವಿದ್ಯುತ್ ದರ ಏರಿಕೆಯಿಂದ ಕ್ರಷರ್ ಉದ್ಯಮ ಸಂಕಷ್ಟಕ್ಕೆ ಸಿಲುಕಿದೆ. ನಷ್ಟ ತಡೆಯಲು ಜಲ್ಲಿ ದರ ಹೆಚ್ಚಳ ಅನಿವಾರ್ಯವಾಗಿದೆ."
>
> **–ಆರ್.ಸಿ. ಕಾಮಾಜಿ,** ಅಧ್ಯಕ್ಷರು, ಜಿಲ್ಲಾ ಕ್ವಾರಿ ಮತ್ತು ಸ್ಟೋನ್ ಕ್ರಷರ್ ಮಾಲೀಕರ ಸಂಘ

▶▶2ನೇ ಪುಟಕ್ಕೆ

---

ಬಿತ್ತನೆ ಮಾಡಿದ ಬೆಳೆಗಳಿಗೆ ಜೀವಜಲ; ಗೊಬ್ಬರಕ್ಕಾಗಿ ಮತ್ತೆ ಸಾಲಿನಲ್ಲಿ ನಿಂತ ಅನ್ನದಾತ

# ಮೃಗಶಿರ ಮಳೆಗೆ ರೈತರಲ್ಲಿ ಹೊಸ ಉತ್ಸಾಹ

■ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ

ಎಲ್‌ನೀನೋ ಪರಿಣಾಮದಿಂದ ಈ ವರ್ಷ ಮಳೆ ಕೊರತೆ ಉಂಟಾಗಲಿದೆ ಎಂಬ ಆತಂಕದ ನಡುವೆಯೂ ಭೂಮಿತಾಯಿ ಮತ್ತು ಮಳೆರಾಯನ ಮೇಲಿನ ನಂಬಿಕೆಯಿಂದ ಬಿತ್ತನೆ ಕಾರ್ಯದಲ್ಲಿ ತೊಡಗಿದ್ದ ರೈತ ಸಮುದಾಯಕ್ಕೆ ಶನಿವಾರ ಸುರಿದ ಮೃಗಶಿರ ಮಳೆ ಹೊಸ ಚೈತನ್ಯ ತುಂಬಿದೆ.

ಹೆಸರು, ಮೆಕ್ಕೆಜೋಳ, ಉಳ್ಳಾಗಡ್ಡಿ, ಹತ್ತಿ, ಶೇಂಗಾ, ತೊಗರಿ ಹಾಗೂ ಮೆಣಸಿನಕಾಯಿ ಸೇರಿದಂತೆ ವಿವಿಧ ಬೆಳೆಗಳ ಬಿತ್ತನೆ ಈಗಾಗಲೇ ಆರಂಭವಾಗಿದ್ದು, ಉತ್ತಮ ಮಳೆಯಿಂದ ರೈತರ ಮುಖದಲ್ಲಿ ಸಂತಸ ಮನೆಮಾಡಿದೆ.



ಬೀಜ, ಗೊಬ್ಬರ, ಡೀಸೆಲ್ ಸೇರಿ ಸಾವಿರಾರು ರೂಪಾಯಿ ಖರ್ಚು ಮಾಡಿ ಬಿತ್ತನೆ ಮಾಡಿದ ಬಳಿಕ ಮಳೆ ಬಾರದಿದ್ದರೆ ಹೇಗೆ ಎಂಬ ಆತಂಕದಲ್ಲಿದ್ದ ರೈತರಿಗೆ ಮಳೆ ನಿರಾಳತೆ ತಂದಿದೆ.

ತಾಲೂಕಿನ ಶಿಗ್ಲಿ, ರಾಮಗಿರಿ, ಗೊಜನೂರ, ದೊಡ್ಡೂರ, ಸೂರಣಗಿ, ಬಾಲೆಹೊಸೂರ, ಬಡ್ನಿ, ಆದ್ರಳ್ಳಿ, ಯಳವತ್ತಿ, ಯತ್ನಳ್ಳಿ ಸೇರಿದಂತೆ ಬಹುತೇಕ ಭಾಗಗಳಲ್ಲಿ ಉತ್ತಮ ಮಳೆಯಾಗಿದೆ. ಜಮೀನುಗಳ ತಗ್ಗು ಪ್ರದೇಶಗಳು, ಕೆರೆ–ಕಟ್ಟೆಗಳು

> "ಮಳೆ ಕೊರತೆ ಆತಂಕದ ನಡುವೆಯೂ ಕೃಷಿ ನಂಬಿ ಬಿತ್ತನೆ ಮಾಡಿದ್ದೇವೆ. ಇದೀಗ ಸುರಿದ ಮೃಗಶಿರ ಮಳೆ ರೈತರಲ್ಲಿ ಹೊಸ ಭರವಸೆ ಮೂಡಿಸಿದೆ."
>
> **–ಚನ್ನಪ್ಪ ಚಣ್ಣುಕಿ,** ರೈತ ಮುಖಂಡ

# ನಾಳೆ ಗದಗದಲ್ಲಿ ನೇರ ಸಂದರ್ಶನ

■ವಿಜಯಸಾಕ್ಷಿ ಸುದ್ದಿ, ಗದಗ

ಉದ್ಯೋಗಾಕಾಂಕ್ಷಿ ಯುವಕರಿಗೆ ಮತ್ತೊಂದು ಅವಕಾಶ ಒದಗಿಸಿರುವ ಜಿಲ್ಲಾ ಉದ್ಯೋಗ ವಿನಿಮಯ ಕಚೇರಿ, ಜೂನ್ 8ರಂದು ಗದಗದಲ್ಲಿ ನೇರ ಸಂದರ್ಶನ ಆಯೋಜಿಸಿದೆ.

ನಗರದ ಮುಳಗುಂದ ರಸ್ತೆಯಲ್ಲಿರುವ ಕ್ರೆಡಿಟ್ ಆಕ್ಸಿಸ್ ಗ್ರಾಮೀಣ ಕೂಟ್ ಲಿಮಿಟೆಡ್ ಕಚೇರಿಯಲ್ಲಿ ಸೋಮವಾರ ಬೆಳಿಗ್ಗೆ 10 ಗಂಟೆಗೆ ಸಂದರ್ಶನ ನಡೆಯಲಿದೆ.

CreditAccess Grameen Limited ಕಂಪನಿಯು ನೇರ ಸಂದರ್ಶನದಲ್ಲಿ ಭಾಗವಹಿಸಲಿದ್ದು, ಪಿಯುಸಿ, ಡಿಪ್ಲೊಮಾ ಹಾಗೂ ಯಾವುದೇ ಪದವಿ ವಿದ್ಯಾರ್ಹತೆ ಹೊಂದಿರುವ ಅಭ್ಯರ್ಥಿಗಳು ಪಾಲ್ಗೊಳ್ಳಬಹುದು. ಪುರುಷ ಅಭ್ಯರ್ಥಿಗಳಿಗೆ 19ರಿಂದ 29 ವರ್ಷ ಹಾಗೂ ಮಹಿಳಾ ಅಭ್ಯರ್ಥಿಗಳಿಗೆ 19ರಿಂದ 35 ವರ್ಷ ವಯೋಮಿತಿ ನಿಗದಿಪಡಿಸಲಾಗಿದೆ. ಗದಗ, ಸಿಂಧನೂರು ಹಾಗೂ ಕುಷ್ಟಗಿ ಪ್ರದೇಶಗಳಲ್ಲಿ ಖಾಲಿ ಹುದ್ದೆಗಳಿದ್ದು, ಅಭ್ಯರ್ಥಿಗಳು ಕಡ್ಡಾಯವಾಗಿ ದ್ವಿಚಕ್ರ ವಾಹನ ಹೊಂದಿರಬೇಕು. ಅಭ್ಯರ್ಥಿಗಳು ವಿದ್ಯಾರ್ಹತೆಯ ಅಂಕಪಟ್ಟಿ ಜೆರಾಕ್ಸ್ ಪ್ರತಿಗಳು, ಎರಡು ಬಯೋಡಾಟಾ ಪ್ರತಿಗಳು ಹಾಗೂ ಆಧಾರ್ ಕಾರ್ಡ್ ಜೆರಾಕ್ಸ್ ಪ್ರತಿಯೊಂದಿಗೆ ಸಂದರ್ಶನಕ್ಕೆ ಹಾಜರಾಗಬೇಕು.

ನೇರ ಸಂದರ್ಶನದಲ್ಲಿ ಭಾಗವಹಿಸುವ ಅಭ್ಯರ್ಥಿಗಳಿಗೆ ನೋಂದಣಿ ಕಡ್ಡಾಯವಾಗಿದ್ದು, ಯುವನಿಧಿ ಯೋಜನೆಯ ಫಲಾನುಭವಿಗಳು ಕಡ್ಡಾಯವಾಗಿ ಪಾಲ್ಗೊಳ್ಳಬೇಕು ಎಂದು ಜಿಲ್ಲಾ ಉದ್ಯೋಗಾಧಿಕಾರಿ ಬಸವಂತ ಪಿ.ಎನ್. ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಮೃಗಶಿರ ಮಳೆಗೆ ರೈತರಲ್ಲಿ ಹೊಸ ಉತ್ಸಾಹ

▶▶ಮೊದಲನೇ ಪುಟದಿಂದ

ನೀರಿನಿಂದ ತುಂಬಿ, ಹಳ್ಳಗಳು ಹರಿಯಲು ಆರಂಭಿಸಿವೆ.

ಮಳೆಯ ಪರಿಣಾಮ ರೈತರು ಬೀಜ ಮತ್ತು ರಸಗೊಬ್ಬರ ಖರೀದಿಗಾಗಿ ಕೃಷಿ ಕೇಂದ್ರಗಳ ಮುಂದೆ ಸಾಲುಗಟ್ಟಿ ನಿಂತ ದೃಶ್ಯ ಸಾಮಾನ್ಯವಾಗಿತ್ತು. ಆದರೆ ಪ್ರತಿ ವರ್ಷದಂತೆ ಈ ವರ್ಷವೂ ಡಿಎಪಿ ಹಾಗೂ ಯೂರಿಯಾ ಗೊಬ್ಬರಕ್ಕಾಗಿ ರೈತರು ಪರದಾಡುವ ಪರಿಸ್ಥಿತಿ ನಿರ್ಮಾಣವಾಗಿದೆ. ಇನ್ನೊಂದೆಡೆ, ಪಟ್ಟಣ ಹಾಗೂ ಗ್ರಾಮೀಣ ಭಾಗದ ಚರಂಡಿಗಳು ತ್ಯಾಜ್ಯದಿಂದ ಮುಚ್ಚಿಕೊಂಡಿದ್ದರಿಂದ ಮಳೆ ನೀರು ರಸ್ತೆ ಮೇಲೆ ಹರಿದು ಅವ್ಯವಸ್ಥೆ ಸೃಷ್ಟಿಸಿತು. ತಗ್ಗು-ಗುಂಡಿಗಳಿಂದ ಕೂಡಿರುವ ರಸ್ತೆಗಳ ದುಸ್ಥಿತಿ ಮತ್ತೊಮ್ಮೆ ಬಯಲಾಗಿದ್ದು, ವಾಹನ ಸವಾರರು ಹಾಗೂ ಸಾರ್ವಜನಿಕರು ಸಂಚಾರಕ್ಕೆ ಪರದಾಡುವಂತಾಯಿತು.

ಲಕ್ಷ್ಮೇಶ್ವರ ಪಟ್ಟಣಕ್ಕೆ ಕಳೆದ ಒಂದು ತಿಂಗಳಿನಿಂದ ನದಿ ನೀರಿನ ಪೂರೈಕೆ ಸ್ಥಗಿತಗೊಂಡಿರುವ ಹಿನ್ನೆಲೆಯಲ್ಲಿ ಹಲವರು ಮಳೆ ನೀರನ್ನು ಸಂಗ್ರಹಿಸಿಕೊಂಡ ದೃಶ್ಯ ಕಂಡುಬಂತು. ಸಂಜೆ ವೇಳೆ ಆರಂಭವಾದ ನಿರಂತರ ಮಳೆಯಿಂದ ವ್ಯಾಪಾರ-ವಹಿವಾಟು ಹಾಗೂ ಸಂಚಾರಕ್ಕೂ ಅಡಚಣೆ ಉಂಟಾಯಿತು. ಜನರು ಮತ್ತೆ ಛತ್ರಿ, ರೇನ್‌ಕೋಟ್ ಹಾಗೂ ಸ್ವೆಟರ್‌ಗಳ ಮೊರೆ ಹೋದರು.

### "ಬೇಡಿಕೆಗೆ ತಕ್ಕ ಹೊಸ ಘಟಕ ಸ್ಥಾಪಿಸಿ"-ಜಿಲ್ಲಾಧಿಕಾರಿ ಸಿ.ಎನ್. ಶ್ರೀಧರ್

# ಆಹಾರ ಸಂಸ್ಕರಣೆಗೆ ಹೊಸ ದಿಕ್ಕು

■ವಿಜಯಸಾಕ್ಷಿ ಸುದ್ದಿ, ಗದಗ

ಇಂದಿನ ಮಾರುಕಟ್ಟೆ ಬೇಡಿಕೆಗೆ ಅನುಗುಣವಾಗಿ ಹೊಸ ಆಹಾರ ಸಂಸ್ಕರಣಾ ಘಟಕಗಳನ್ನು ಗುರುತಿಸಿ ಸ್ಥಾಪಿಸುವ ಅವಶ್ಯಕತೆಯಿದೆ ಎಂದು ಜಿಲ್ಲಾಧಿಕಾರಿ ಸಿ.ಎನ್. ಶ್ರೀಧರ್ ಹೇಳಿದರು.

ನಗರದ ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ಶುಕ್ರವಾರ ನಡೆದ ಪ್ರಧಾನಮಂತ್ರಿಗಳ ಕಿರು ಆಹಾರ ಸಂಸ್ಕರಣ ಉದ್ದಿಮೆಗಳ ನಿಯಮಬದ್ಧಗೊಳಿಸುವಿಕೆ ಯೋಜನೆ (ಪಿ.ಎಮ್.ಎಫ್.ಎಮ್.ಇ) ಜಿಲ್ಲಾ ಸಮಿತಿ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.

ಆತ್ಮನಿರ್ಭರ ಭಾರತ ಅಭಿಯಾನದ ಅಂಗವಾಗಿ ನಡೆದ ಸಭೆಯಲ್ಲಿ ಪಿ.ಎಮ್.ಎಫ್.ಎಮ್.ಇ ಯೋಜನೆಯಡಿ ಬೇಕರಿ ಘಟಕದಲ್ಲಿ ತಯಾರಿಸಲಾದ ಕೇಕ್ ಕತ್ತರಿಸುವ ಮೂಲಕ ಸಭೆಗೆ ಚಾಲನೆ ನೀಡಲಾಯಿತು.

ಜಿಲ್ಲೆಯಲ್ಲಿ ಹೆಚ್ಚಾಗಿ ಬೆಳೆಯುವ ಹೆಸರು, ಕಡಲೆ ಹಾಗೂ ಮೆಕ್ಕೆಜೋಳದ ಸಂಸ್ಕರಣೆ ಮತ್ತು ಮೌಲ್ಯವರ್ಧನೆಗೆ ಆದ್ಯತೆ ನೀಡಬೇಕು. ಜೊತೆಗೆ ತರಕಾರಿಗಳನ್ನು ಒಣಗಿಸಿ ಪುಡಿ ಮಾಡುವ ಘಟಕಗಳನ್ನು ಆರಂಭಿಸುವ ಅಗತ್ಯವಿದೆ ಎಂದು ಜಿಲ್ಲಾಧಿಕಾರಿಗಳು ಹೇಳಿದರು.



"ಉಪ್ಪಿಟ್ಟು, ಅವಲಕ್ಕಿ, ಸೂಪ್ ತಯಾರಿಕೆಗೆ ಬೇಕಾಗುವ ಒಣ ತರಕಾರಿ ಪುಡಿ, ಬೆಳ್ಳುಳ್ಳಿ ಹಾಗೂ ಈರುಳ್ಳಿ ಪೇಸ್ಟ್‌ಗಳಿಗೆ ಮಾರುಕಟ್ಟೆಯಲ್ಲಿ ಹೆಚ್ಚಿನ ಬೇಡಿಕೆ ಇದೆ. ಉತ್ತಮ ಪ್ಯಾಕಿಂಗ್ ಮತ್ತು ಬ್ರಾಂಡಿಂಗ್ ಮೂಲಕ ರೈತರು ಹಾಗೂ ಉದ್ಯಮಿಗಳು ಹೆಚ್ಚಿನ ಲಾಭ ಪಡೆಯಬಹುದು," ಎಂದು ಸಲಹೆ ನೀಡಿದರು.

ಜಂಟಿ ಕೃಷಿ ನಿರ್ದೇಶಕಿ ಶ್ರೀಮತಿ ಚೇತನಾ ಪಾಟೀಲ ಮಾತನಾಡಿ, "2020-21ರಿಂದ ಜಾರಿಯಲ್ಲಿರುವ ಪಿ.ಎಮ್.ಎಫ್.ಎಮ್.ಇ ಯೋಜನೆಯಡಿ ಜಿಲ್ಲೆಯಲ್ಲಿ ಇದುವರೆಗೆ 276 ಆಹಾರ ಸಂಸ್ಕರಣಾ ಘಟಕಗಳು ಸ್ಥಾಪನೆಯಾಗಿವೆ," ಎಂದು ಮಾಹಿತಿ ನೀಡಿದರು.

> "ಉತ್ತಮ ಪ್ಯಾಕಿಂಗ್ ಮತ್ತು ಬ್ರಾಂಡಿಂಗ್ ಮೂಲಕ ಆಹಾರ ಸಂಸ್ಕರಣಾ ಉತ್ಪನ್ನಗಳಿಗೆ ಉತ್ತಮ ಮಾರುಕಟ್ಟೆ ಬೆಲೆ ದೊರೆತು ರೈತರಿಗೆ ಹೆಚ್ಚಿನ ಲಾಭ ಸಾಧ್ಯ."
> – ಸಿ.ಎನ್. ಶ್ರೀಧರ, ಜಿಲ್ಲಾಧಿಕಾರಿ

ರೈತರು ಕೃಷಿ ಉತ್ಪನ್ನಗಳ ಮೌಲ್ಯವರ್ಧನೆಯ ಮೂಲಕ ಆದಾಯ ದ್ವಿಗುಣಗೊಳಿಸಲು ಶೇ.50ರ ಸಹಾಯಧನ ಹಾಗೂ ಉಳಿದ ಮೊತ್ತಕ್ಕೆ ಬ್ಯಾಂಕ್ ಸಾಲ ಸೌಲಭ್ಯ ಕಲ್ಪಿಸಲಾಗುತ್ತಿದೆ ಎಂದು ತಿಳಿಸಿದರು.

ಯೋಜನೆಯಡಿ ಹೆಚ್ಚು ಘಟಕಗಳನ್ನು ಸ್ಥಾಪಿಸಿರುವ ಗೀರಿಶ್, ಬಸಪ್ಪ ಹಾಗೂ ಶ್ರೀನಿವಾಸ ಅವರನ್ನು ಇದೇ ವೇಳೆ ಸನ್ಮಾನಿಸಲಾಯಿತು.

ಸಭೆಯಲ್ಲಿ ಪಿ.ಎಮ್.ಎಫ್.ಎಮ್.ಇ ಘಟಕಗಳಡಿ ತಯಾರಿಸಲಾದ ರೊಟ್ಟಿ, ಎಣ್ಣೆ, ಚಿಪ್ಸ್, ಪಾಪ್‌ಕಾರ್ನ್ ಸೇರಿದಂತೆ ವಿವಿಧ ಉತ್ಪನ್ನಗಳ ಪ್ರದರ್ಶನವೂ ನಡೆಯಿತು.

ಲೀಡ್ ಬ್ಯಾಂಕ್ ಮ್ಯಾನೇಜರ್ ಸಂತೋಷ ಮ್ಯಾಲನ್‌ಹಳ್ಳಿ, ವಿವಿಧ ಬ್ಯಾಂಕ್‌ಗಳಲ್ಲಿ ಬಾಕಿ ಇರುವ ಅರ್ಜಿಗಳ ವಿಲೇವಾರಿಗೆ ಕ್ರಮ ಕೈಗೊಳ್ಳಲಾಗುವುದು ಎಂದು ತಿಳಿಸಿದರು.

# ಜಿ.ಎಸ್. ಪಾಟೀಲರಿಗೆ ಸಚಿವ ಸ್ಥಾನಕ್ಕಾಗಿ ಉರುಳು ಸೇವೆ

▶▶ಮೊದಲನೇ ಪುಟದಿಂದ

ಈ ಸಂದರ್ಭದಲ್ಲಿ ನಿಂಗನಗೌಡ ಲಕ್ಕನಗೌಡ್ರ, ವೀರನಗೌಡ ಪಾಟೀಲ, ಅಲ್ಲಾಬಕ್ಷಿ ನದಾಫ್, ಸಂತೋಷ ಹನುಮಸಾಗರ, ಕಳಕಪ್ಪ ಅಬ್ಬಿಗೇರಿ, ಶೇಖಪ್ಪ ಜುಟ್ಲದ, ಅಂದಾನಗೌಡ ಪಾಟೀಲ, ಕಳನಗೌಡ ಪೋಲಿಸ್ ಪಾಟೀಲ, ಕುಮಾರಸ್ವಾಮಿ ಕೋರಧಾನ್ಯಮಠ, ಶೇಖಪ್ಪ ಕೆಂಗಾರ, ಎ.ಎ. ನವಲಗುಂದ, ಸೋಮನಗೌಡ ಲಕ್ಕನಗೌಡ್ರ, ಬಾಳಪ್ಪ ಸೋಮಗೊಂಡ, ಫಕ್ರುಸಾಬ್ ರೇವಡಿಗಾರ, ಮಹ್ಮದಗೌಸ ಹೊಸಮನಿ, ಮಾಸಪ್ಪ ಕೊಂಡಿ, ವೀರಪ್ಪ ಹಾಲನ್ನವರ, ಆಶೀಫ್ ಹೊಸಮನಿ, ಸುರೇಶ ಹುನಗುಂದ, ದಾದಾಸಾಬ ನದಾಫ್, ವೀರೇಶ ಪಮ್ಮಾರ, ಪ್ರಕಾಶ ಪಾದಗಟ್ಟಿ ಸೇರಿದಂತೆ ಹಲವರು ಭಾಗವಹಿಸಿದ್ದರು.

### ಜನಪರ ಹೋರಾಟಗಾರ ಚುನಾವಣೆಗೆ ಬರಲಿ ಎಂದು ವಕೀಲರ ಸಂಘದ ಒತ್ತಾಯ

# ಶಿರಹಟ್ಟಿ ರಾಜಕೀಯದಲ್ಲಿ ರವಿಕಾಂತ ಅಂಗಡಿ ಹೆಸರು ಸದ್ದು!



■ವಿಜಯಸಾಕ್ಷಿ ಸುದ್ದಿ, ಶಿರಹಟ್ಟಿ

ಮುಂಬರುವ ವಿಧಾನಸಭಾ ಚುನಾವಣೆಗೆ ಮುನ್ನ ಶಿರಹಟ್ಟಿ ರಾಜಕೀಯದಲ್ಲಿ ಹೊಸ ಚರ್ಚೆಗೆ ಕಾರಣವಾಗುವ ಬೆಳವಣಿಗೆಯಲ್ಲಿ, ವಕೀಲ ಹಾಗೂ ಹೋರಾಟಗಾರ ರವಿಕಾಂತ ಅಂಗಡಿ ಅವರು ಚುನಾವಣಾ ಕಣಕ್ಕಿಳಿಯಬೇಕು ಎಂದು ಶಿರಹಟ್ಟಿ ತಾಲೂಕು ವಕೀಲರ ಸಂಘ ಆಗ್ರಹಿಸಿದೆ.

ಪಟ್ಟಣದ ವಕೀಲರ ಸಂಘದಲ್ಲಿ ನಡೆದ ಸಮಾಲೋಚನಾ ಸಭೆಯಲ್ಲಿ ಮಾತನಾಡಿದ ಸಂಘದ ಅಧ್ಯಕ್ಷ ಎಸ್.ವೈ. ಗೊಬ್ಬರಗುಂಪಿ, "ಶಿರಹಟ್ಟಿ ಮತಕ್ಷೇತ್ರದ ಸಮಗ್ರ ಅಭಿವೃದ್ಧಿ ಹಾಗೂ ಜನರ ಸಮಸ್ಯೆಗಳ ಶಾಶ್ವತ ಪರಿಹಾರಕ್ಕಾಗಿ ದೀರ್ಘಕಾಲದಿಂದ ಹೋರಾಟ ನಡೆಸುತ್ತಿರುವ ವಕೀಲ ರವಿಕಾಂತ ಅಂಗಡಿ ಅವರು ಮುಂಬರುವ ವಿಧಾನಸಭಾ ಚುನಾವಣೆಯಲ್ಲಿ ಸ್ಪರ್ಧಿಸಬೇಕು," ಎಂದು ಒತ್ತಾಯಿಸಿದರು.

ರವಿಕಾಂತ ಅಂಗಡಿ ಅವರು ಹಲವು ವರ್ಷಗಳಿಂದ ಜನಪರ ಹಾಗೂ ರೈತಪರ ಹೋರಾಟಗಳಲ್ಲಿ ಸಕ್ರಿಯರಾಗಿದ್ದು, ಶಿರಹಟ್ಟಿ, ಮುಂಡರಗಿ ಹಾಗೂ ಲಕ್ಷ್ಮೇಶ್ವರ ಭಾಗದ ರೈತರ ಜಮೀನು ರಕ್ಷಣೆ, ರೈತರ ಹಕ್ಕುಗಳ ಪರ ಹೋರಾಟ, ಸಾಮಾಜಿಕ ನ್ಯಾಯ ಹಾಗೂ ಪರಿಸರ ಸಂರಕ್ಷಣೆಯಂತಹ ವಿಚಾರಗಳಲ್ಲಿ ಗಮನಾರ್ಹ ಪಾತ್ರ ವಹಿಸಿದ್ದಾರೆ ಎಂದು ಹೇಳಿದರು.

ಸಾಮಾನ್ಯ ಜನರ ಸಂಕಷ್ಟಗಳಿಗೆ ತಕ್ಷಣ ಸ್ಪಂದಿಸುವ ಗುಣ, ಕಾನೂನು ಕ್ಷೇತ್ರದಲ್ಲಿನ ಅನುಭವ ಹಾಗೂ ಜನಸೇವೆಯ ಬದ್ಧತೆಯಿಂದ ರವಿಕಾಂತ ಅಂಗಡಿ ಅವರು ಸಾರ್ವಜನಿಕರ ವಿಶ್ವಾಸ ಗಳಿಸಿದ್ದಾರೆ. ಕ್ಷೇತ್ರದ ಅಭಿವೃದ್ಧಿಗೆ ಹೊಸ ಚಿಂತನೆ ಹಾಗೂ ಪರಿಣಾಮಕಾರಿ ನಾಯಕತ್ವ ನೀಡುವ ಸಾಮರ್ಥ್ಯ ಅವರಲ್ಲಿದೆ ಎಂದು ಅಭಿಪ್ರಾಯಪಟ್ಟರು.

ಶಿರಹಟ್ಟಿ ಮತಕ್ಷೇತ್ರದ ಜನರು ಅಭಿವೃದ್ಧಿಪರ ಹಾಗೂ ಜನರ ನಡುವೆ ನಿರಂತರ ಸಂಪರ್ಕ ಹೊಂದಿರುವ ನಾಯಕತ್ವ ನಿರೀಕ್ಷಿಸುತ್ತಿದ್ದಾರೆ. ಈ ಹಿನ್ನೆಲೆಯಲ್ಲಿ ರವಿಕಾಂತ ಅಂಗಡಿ ಅವರು ಚುನಾವಣೆಗೆ ಸ್ಪರ್ಧಿಸಬೇಕು ಎಂಬುದು ಕ್ಷೇತ್ರದ ಜನರ ಆಶಯವಾಗಿದೆ ಎಂದು ತಿಳಿಸಿದರು.

ಸಭೆಯಲ್ಲಿ ವಕೀಲರ ಸಂಘದ ಉಪಾಧ್ಯಕ್ಷ ಎ.ವಿ. ಮಾನೆ, ಕಾರ್ಯದರ್ಶಿ ಎ.ಎ. ಬೇವಿನಗಿಡದ, ಜಂಟಿ ಕಾರ್ಯದರ್ಶಿ ಮಹೇಶ ದಾನಪ್ಪಗೌಡರ, ಖಜಾಂಚಿ ಶ್ರೀಮತಿ ಬಂಡಿವಡ್ಡರ ಸೇರಿದಂತೆ ಹಲವು ಸದಸ್ಯರು ಉಪಸ್ಥಿತರಿದ್ದರು.

#### ಜನರ ಪರ ಹೋರಾಟಕ್ಕೆ ಸದಾ ಸಿದ್ಧ

ಸಭೆಯಲ್ಲಿ ಮಾತನಾಡಿದ ವಕೀಲ ರವಿಕಾಂತ ಅಂಗಡಿ, "ನಾನು ಜನರ ಹಾಗೂ ರೈತರ ಸಮಸ್ಯೆಗಳ ಪರ ಸಾಕಷ್ಟು ಹೋರಾಟಗಳನ್ನು ನಡೆಸಿದ್ದೇನೆ. ಮುಂದೆಯೂ ಜನಪರ ಹಾಗೂ ರೈತಪರ ಕಾರ್ಯಗಳಿಗೆ ಸದಾ ಸಿದ್ಧನಿದ್ದೇನೆ. ಎಲ್ಲರ ಆಶಯದಂತೆ ಸ್ಪರ್ಧಿಸುವ ಅವಕಾಶ ದೊರೆತಲ್ಲಿ ಜನರ ಸೇವೆಗೆ ಇನ್ನಷ್ಟು ಬಲ ದೊರೆಯುತ್ತದೆ," ಎಂದು ಹೇಳಿದರು.

### ಪೌರತ್ವ ತರಬೇತಿ-ಉಚಿತ ರಕ್ತ ತಪಾಸಣಾ ಶಿಬಿರದಲ್ಲಿ ಡಾ. ವೈಕುಂಠೆ ಕರೆ

# ವರ್ಷಕ್ಕೆ ಎರಡು ಬಾರಿ ರಕ್ತದಾನ ಮಾಡಿ

■ವಿಜಯಸಾಕ್ಷಿ ಸುದ್ದಿ, ಗದಗ

ರಕ್ತದಾನವು ಕೇವಲ ಮತ್ತೊಬ್ಬರ ಜೀವ ಉಳಿಸುವ ಪುಣ್ಯದ ಕೆಲಸವಲ್ಲ, ಅದು ದಾನಿಯ ಆರೋಗ್ಯಕ್ಕೂ ವರದಾನ. ಪ್ರತಿಯೊಬ್ಬ ಆರೋಗ್ಯವಂತ ವ್ಯಕ್ತಿಯೂ ವರ್ಷಕ್ಕೆ ಕನಿಷ್ಠ ಎರಡು ಬಾರಿ ರಕ್ತದಾನ ಮಾಡುವ ಸಂಕಲ್ಪ ಮಾಡಬೇಕು ಎಂದು ರಕ್ತ ತಪಾಸಕ ಡಾ. ದತ್ತಾತ್ರೇಯ ವೈಕುಂಠೆ ಕರೆ ನೀಡಿದರು.

ನಗರದ ಶಾಸ್ತ್ರಿ ಮಹಿಳಾ ಬಿ.ಎಡ್ ಕಾಲೇಜು ಸಭಾಂಗಣದಲ್ಲಿ ಕರ್ನಾಟಕ ರಾಜ್ಯ ಅಕ್ಕಮಹಾದೇವಿ ಮಹಿಳಾ ವಿಶ್ವವಿದ್ಯಾಲಯ, ಜೆಡಿಎಸ್ ಶಿಕ್ಷಣ ಸಂಸ್ಥೆ ಗದಗ ಹಾಗೂ ಭಾವಸಾರ ವಿಷನ್ ಇಂಡಿಯಾ ಇವರ ಸಂಯುಕ್ತ ಆಶ್ರಯದಲ್ಲಿ ಬಿ.ಎಡ್ ಪ್ರಶಿಕ್ಷಣಾರ್ಥಿಗಳಿಗಾಗಿ ಆಯೋಜಿಸಿದ್ದ 'ಪೌರತ್ವ ತರಬೇತಿ ಹಾಗೂ ಉಚಿತ ರಕ್ತ ತಪಾಸಣಾ ಶಿಬಿರ'ವನ್ನು ಉದ್ಘಾಟಿಸಿ ಅವರು ಮಾತನಾಡಿದರು.



ರಕ್ತದಾನದ ವೈಜ್ಞಾನಿಕ ಮಹತ್ವವನ್ನು ವಿವರಿಸಿದ ಅವರು, "ಇಂದು ವಿಜ್ಞಾನ ಎಷ್ಟೇ ಮುಂದುವರೆದರೂ ರಕ್ತವನ್ನು ಕೃತಕವಾಗಿ ಉತ್ಪಾದಿಸಲು ಸಾಧ್ಯವಿಲ್ಲ. ನಾವು ರಕ್ತದಾನ ಮಾಡಿದಾಗ ದೇಹದಲ್ಲಿ ಹೊಸ ರಕ್ತಕಣಗಳ ಉತ್ಪತ್ತಿ ಚುರುಕುಗೊಳ್ಳುತ್ತದೆ. ಇದರಿಂದ ದೇಹದ ಚಯಾಪಚಯ ಕ್ರಿಯೆ ಸುಧಾರಿಸಿ ಆರೋಗ್ಯ ಉತ್ತಮವಾಗುತ್ತದೆ," ಎಂದರು.

ಪ್ರತಿಯೊಬ್ಬರೂ ತಮ್ಮ ರಕ್ತದ ಗುಂಪಿನ ಬಗ್ಗೆ ಸ್ಪಷ್ಟ ಮಾಹಿತಿ ಹೊಂದಿರಬೇಕು. ಅಪಘಾತ ಹಾಗೂ ತುರ್ತು ಚಿಕಿತ್ಸೆಯ ಸಂದರ್ಭಗಳಲ್ಲಿ ಇದು ಜೀವ ಉಳಿಸಲು ನೆರವಾಗುತ್ತದೆ ಎಂದು ಅವರು ಹೇಳಿದರು.

ಜನ್ಮದಿನ, ವಿವಾಹ ವಾರ್ಷಿಕೋತ್ಸವ ಹಾಗೂ ಹಬ್ಬ-ಹರಿದಿನಗಳಂತಹ ಸಂದರ್ಭಗಳಲ್ಲಿ ರಕ್ತದಾನ ಮಾಡುವ ಸಂಸ್ಕೃತಿ ಬೆಳೆಸಬೇಕು ಎಂದು ಸಲಹೆ ನೀಡಿದರು.

> "ಶಾಲಾ ಹಂತದಲ್ಲೇ ಮಕ್ಕಳಲ್ಲಿ ರಕ್ತದಾನದ ಬಗ್ಗೆ ಜಾಗೃತಿ ಮೂಡಿಸಲು ರಕ್ತದ ಗುಂಪಿನ ಮಹತ್ವ ಹಾಗೂ ರಕ್ತದಾನದ ಅಗತ್ಯವನ್ನು ಪಠ್ಯಪುಸ್ತಕಗಳಲ್ಲಿ ಅಳವಡಿಸಬೇಕು."
> –ಡಾ. ದತ್ತಾತ್ರೇಯ ವೈಕುಂಠೆ

ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿದ್ದ ಕಾಲೇಜಿನ ಪ್ರಾಚಾರ್ಯೆ ಡಾ. ಎಸ್.ಬಿ. ಹೊನ್ನಗುಡಿ ಮಾತನಾಡಿ, "ಶಿಕ್ಷಕಿಯರಾಗುವ ನೀವು ಸಮಾಜಕ್ಕೆ ಮಾದರಿಯಾಗಬೇಕು. ನಿಮ್ಮ ಒಂದು ಯೂನಿಟ್ ರಕ್ತ ಮೂರು ಜೀವಗಳನ್ನು ಉಳಿಸಬಲ್ಲದು," ಎಂದು ಪ್ರಶಿಕ್ಷಣಾರ್ಥಿಗಳಿಗೆ ಕರೆ ನೀಡಿದರು.

ಶಿಬಿರದಲ್ಲಿ ಡಾ. ದತ್ತಾತ್ರೇಯ ವೈಕುಂಠೆ ಅವರು 95 ಬಿ.ಎಡ್ ಪ್ರಶಿಕ್ಷಣಾರ್ಥಿಗಳ ರಕ್ತದ ಗುಂಪು ತಪಾಸಣೆ ನಡೆಸಿ, ಬಳಿಕ ರಕ್ತದ ಗುಂಪು ನಮೂದಿಸಿದ ಗುರುತಿನ ಚೀಟಿಗಳನ್ನು ವಿತರಿಸಿದರು.

ಮುಖ್ಯ ಅತಿಥಿಗಳಾಗಿ ಡಾ. ಹರೀಶ ವೈಕುಂಠೆ, ನಾಗರಾಜ ವಾದೋನೆ ಭಾಗವಹಿಸಿದ್ದರು. ವೇದಿಕೆಯಲ್ಲಿ ಡಾ. ಡಿ.ಎಂ. ನದಾಫ್, ವಿ.ಕೆ. ಅರಳಿಮಠ, ಗಂಗಾಧರ, ಆರ್.ಎ. ಕೆರೂರ, ಸತೀಶ, ಈಶ್ವರ, ಶ್ರೀಮತಿ ಎನ್.ಎಂ. ಮಟ್ಟಿ ಉಪಸ್ಥಿತರಿದ್ದರು.

ಪ್ರೊ. ಎಂ. ಸಂದೀಪ ಪ್ರಾಸ್ತಾವಿಕವಾಗಿ ಮಾತನಾಡಿದರು. ಸೌಭಾಗ್ಯ ಚೂರಿಮಠ ಹಾಗೂ ಭುವನೇಶ್ವರಿ ಕಮಡೊಳ್ಳಿ ಸಂದರ್ಭೋಚಿತವಾಗಿ ಮಾತನಾಡಿದರು. ಸವಿತಾ ಮತ್ತು ತಂಡ ಪ್ರಾರ್ಥಿಸಿದರು. ಅನುರಾಧಾ ಬೆಟಗೇರಿ ಹಾಗೂ ಗೌರಮ್ಮ ಮಜ್ಜಿಗುಡ್ಡ ಕಾರ್ಯಕ್ರಮ ನಿರೂಪಿಸಿದರು. ನೀಲಮ್ಮ ಐದನಾಳ ವಂದಿಸಿದರು.

# ಮುಳಗುಂದದಲ್ಲಿ ಸಸಿ ನೆಟ್ಟು ಪರಿಸರ ದಿನಾಚರಣೆ



■ವಿಜಯಸಾಕ್ಷಿ ಸುದ್ದಿ, ಮುಳಗುಂದ

ಪಟ್ಟಣ ಪಂಚಾಯತಿ ವತಿಯಿಂದ ವಿಶ್ವ ಪರಿಸರ ದಿನಾಚರಣೆ ಅಂಗವಾಗಿ ಡಾ. ಬಿ.ಆರ್. ಅಂಬೇಡ್ಕರ್ ಉದ್ಯಾನವನದಲ್ಲಿ ಸಸಿ ನೆಡುವ ಕಾರ್ಯಕ್ರಮ ನಡೆಯಿತು.

ಈ ವೇಳೆ ಮಾತನಾಡಿದ ಪಪಂ ಮುಖ್ಯಾಧಿಕಾರಿ ಮಂಜುನಾಥ ಗುಳೆದ, "ಮಾನವನ ಅಸ್ತಿತ್ವ ಮತ್ತು ಪ್ರಕೃತಿಯ ನಡುವೆ ಅವಿನಾಭಾವ ಸಂಬಂಧವಿದೆ. ಪರಿಸರ ಸಂರಕ್ಷಣೆ ಕೇವಲ ಸರ್ಕಾರದ ಜವಾಬ್ದಾರಿಯಲ್ಲ, ಪ್ರತಿಯೊಬ್ಬ ನಾಗರಿಕನ ಆದ್ಯ ಕರ್ತವ್ಯ," ಎಂದು ಹೇಳಿದರು.

ಪರಿಸರ ಉಳಿಸಿ ಬೆಳೆಸುವುದು ಪ್ರತಿಯೊಬ್ಬರ ಜವಾಬ್ದಾರಿಯಾಗಿದ್ದು, ಮುಂದಿನ ಪೀಳಿಗೆಗೆ ಹಸಿರು ಪರಿಸರ ಉಳಿಸುವ ಸಂಕಲ್ಪ ಎಲ್ಲರಲ್ಲೂ ಮೂಡಬೇಕು ಎಂದು ಕರೆ ನೀಡಿದರು.

ಕಾರ್ಯಕ್ರಮದಲ್ಲಿ ಪೊಲೀಸ್ ಇನ್ಸ್‌ಪೆಕ್ಟರ್ ಬಿ.ಜಿ. ಸುಬ್ಬಾಪೂರಮಠ, ವಾಣಿಶ್ರೀ ನಿರಂಜನ, ಶಂಭು ಚವ್ಹಾಣ, ಗಾಯತ್ರಿ ಛಲವಾದಿ, ಉಮಾ ಕುರಹಟ್ಟಿ ಸೇರಿದಂತೆ ಹಲವರು ಭಾಗವಹಿಸಿದ್ದರು.

### ಆಗಸ್ಟ್ 15ಕ್ಕೆ ನಿವೇಶನ ಹಕ್ಕುಪತ್ರ ವಿತರಣೆ ಭರವಸೆ

# 15 ವರ್ಷಗಳ ಕಾಯುವಿಕೆ ಅಂತ್ಯ?

■ವಿಜಯಸಾಕ್ಷಿ ಸುದ್ದಿ, ಮುಳಗುಂದ

ಪಟ್ಟಣ ಪಂಚಾಯತಿ ವತಿಯಿಂದ 2012ರಿಂದ ಕಡುಬಡವರು ಹಾಗೂ ನಿರ್ಗತಿಕರಿಗೆ ಹಂಚಿಕೆಯಾಗಬೇಕಿದ್ದ ನಿವೇಶನಗಳ ವಿತರಣೆ ವಿಳಂಬವಾಗಿರುವುದನ್ನು ಖಂಡಿಸಿ ಮಹಿಳೆಯರು ಪಟ್ಟಣ ಪಂಚಾಯತಿ ಕಚೇರಿ ಎದುರು ಪ್ರತಿಭಟನೆ ನಡೆಸಿದರು.

ಈ ವೇಳೆ ಪ್ರತಿಭಟನಾಕಾರರೊಂದಿಗೆ ಮಾತನಾಡಿದ ಪಪಂ ಮುಖ್ಯಾಧಿಕಾರಿ ಮಂಜುನಾಥ ಗುಳೆದ, ಕಳೆದ 15 ವರ್ಷಗಳಿಂದ ನೆನೆಗುದಿಗೆ ಬಿದ್ದಿದ್ದ ನಿವೇಶನ ಹಂಚಿಕೆ ಪ್ರಕ್ರಿಯೆ ಇದೀಗ ಚುರುಕುಗೊಂಡಿದೆ ಎಂದು ತಿಳಿಸಿದರು.



ಸುಮಾರು 4 ಸಾವಿರ ಅರ್ಜಿಗಳ ಪೈಕಿ 373 ಫಲಾನುಭವಿಗಳ ತಾತ್ಕಾಲಿಕ ಪಟ್ಟಿಯನ್ನು ಈಗಾಗಲೇ ಪ್ರಕಟಿಸಲಾಗಿದ್ದು, ಪರಿಶೀಲನಾ ಪ್ರಕ್ರಿಯೆ ನಡೆಯುತ್ತಿದೆ. ಉಸ್ತುವಾರಿ ಸಚಿವರ ಸೂಚನೆಯಂತೆ ಜಿಲ್ಲಾಧಿಕಾರಿ, ಆಡಳಿತಾಧಿಕಾರಿ ಹಾಗೂ ಅಧಿಕಾರಿಗಳು ಸರ್ವೆ ಕಾರ್ಯ ಕೈಗೊಂಡಿದ್ದು, ನಿವೇಶನ ರಹಿತ ಕುಟುಂಬಗಳ ಸಮೀಕ್ಷೆ ಪೂರ್ಣಗೊಂಡಿದೆ ಎಂದು ಹೇಳಿದರು.

ಆಗಸ್ಟ್ 15ರಂದು ಉಸ್ತುವಾರಿ ಸಚಿವರಿಂದ ಹಕ್ಕುಪತ್ರ ವಿತರಣೆ ಮಾಡುವ ಕುರಿತು ಚರ್ಚೆ ನಡೆದಿದ್ದು, ಪಟ್ಟಣದ ಹಿರಿಯರ ಸಮ್ಮುಖದಲ್ಲಿ ಅಂತಿಮ ನಿರ್ಧಾರ ಕೈಗೊಂಡು ಅರ್ಹ ಕುಟುಂಬಗಳಿಗೆ ನಿವೇಶನ ತಲುಪಿಸುವ ಪ್ರಾಮಾಣಿಕ ಪ್ರಯತ್ನ ಮಾಡಲಾಗುತ್ತಿದೆ ಎಂದು ಭರವಸೆ ನೀಡಿದರು.

ಈ ಸಂದರ್ಭದಲ್ಲಿ ಮುಳಗುಂದ ಠಾಣೆಯ ಪೊಲೀಸ್ ಇನ್ಸ್‌ಪೆಕ್ಟರ್ ಬಿ.ಜಿ. ಸುಬ್ಬಾಪೂರಮಠ ಹಾಗೂ ಪೊಲೀಸ್ ಸಿಬ್ಬಂದಿ ಬಂದುಬಸ್ತ್ ಕೈಗೊಂಡಿದ್ದು, ಪ್ರತಿಭಟನೆ ಶಾಂತಿಯುತವಾಗಿ ಅಂತ್ಯವಾಯಿತು.

## ಅಗ್ನಿವೀರ್‌ಗೆ ನಾಲ್ವರು ವಿದ್ಯಾರ್ಥಿಗಳ ಆಯ್ಕೆ






■ವಿಜಯಸಾಕ್ಷಿ ಸುದ್ದಿ, ನರೇಗಲ

ಪಟ್ಟಣದ ಮರಿಯಪ್ಪ ಬಾಳಪ್ಪ ಕಳಕೊಣ್ಣವರ ಸರ್ಕಾರಿ ಪ್ರಥಮ ದರ್ಜೆ ಮಹಾವಿದ್ಯಾಲಯದ ನಾಲ್ವರು ವಿದ್ಯಾರ್ಥಿಗಳು ಭಾರತೀಯ ಸೇನೆಯ ಅಗ್ನಿಪಥ್ ಯೋಜನೆಯಡಿ ಅಗ್ನಿವೀರ್‌ಗೆ ಆಯ್ಕೆಯಾಗಿದ್ದು, ಕಾಲೇಜಿಗೆ ಹೆಮ್ಮೆ ತಂದಿದ್ದಾರೆ.

ಇತ್ತೀಚೆಗೆ ನಡೆದ ನೇಮಕಾತಿ ಪ್ರಕ್ರಿಯೆಯಲ್ಲಿ ಭಾಗವಹಿಸಿದ್ದ ಬಿಎ 6ನೇ ಸೆಮಿಸ್ಟರ್‌ನ ಕಳಕಾಪುರ ಗ್ರಾಮದ ಶಾರುಖ್ ಹಸನಸಾಬ್ ಗೌಡರ, ಬಿಎ 4ನೇ ಸೆಮಿಸ್ಟರ್‌ನ ಮಾರನಬಸರಿ ಗ್ರಾಮದ ಬಸವರಾಜ್ ಲಂಕೆಪ್ಪ ಕುರಿ, ಬಿಎ 4ನೇ ಸೆಮಿಸ್ಟರ್‌ನ ಜಕ್ಕಲಿ ಗ್ರಾಮದ ಶಬ್ಬೀರಸಾಬ್ ಅಲ್ಲಿಸಾಬ್ ಬಸಾಪುರ ಹಾಗೂ ಬಿಎಸ್‌ಸಿ 4ನೇ ಸೆಮಿಸ್ಟರ್‌ನ ಜಕ್ಕಲಿ ಗ್ರಾಮದ ಶಂಕರಪ್ಪ ಮಲ್ಲಪ್ಪ ಇಟಗಿ ಅವರು ಸೇನೆಗೆ ಆಯ್ಕೆಯಾಗಿದ್ದಾರೆ ಎಂದು ಪ್ರಾಂಶುಪಾಲೆ ಜಯಶ್ರೀ ಮುತಗಾರ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ಅಗ್ನಿವೀರ್‌ಗೆ ಆಯ್ಕೆಯಾದ ವಿದ್ಯಾರ್ಥಿಗಳನ್ನು ಕಾಲೇಜು ಅಭಿವೃದ್ಧಿ ಸಮಿತಿ ಅಧ್ಯಕ್ಷರು ಹಾಗೂ ರೋಣ ಕ್ಷೇತ್ರದ ಶಾಸಕ ಜಿ. ಎಸ್. ಪಾಟೀಲ, ಸಿಡಿಸಿ ಸದಸ್ಯರು ಹಾಗೂ ಕಾಲೇಜಿನ ಸಿಬ್ಬಂದಿ ಅಭಿನಂದಿಸಿದ್ದಾರೆ. ಇತ್ತೀಚೆಗೆ ಕಾಲೇಜಿನಲ್ಲಿ ನಡೆದ ಕ್ಯಾಂಪಸ್ ಸಂದರ್ಶನದಲ್ಲಿ ವಿವಿಧ ಕಂಪನಿಗಳಿಗೆ 79 ವಿದ್ಯಾರ್ಥಿಗಳು ಆಯ್ಕೆಯಾಗಿದ್ದರು. ಇದೀಗ ನಾಲ್ವರು ವಿದ್ಯಾರ್ಥಿಗಳು ಸೇನೆಗೆ ಆಯ್ಕೆಯಾಗುವ ಮೂಲಕ ಕಾಲೇಜಿನ ಕೀರ್ತಿಯನ್ನು ಮತ್ತಷ್ಟು ಹೆಚ್ಚಿಸಿದ್ದಾರೆ.

ಪ್ರಸಕ್ತ ಸಾಲಿನ ಪ್ರಥಮ ವರ್ಷದ ಪದವಿ ಕೋರ್ಸ್‌ಗಳ ಪ್ರವೇಶಾತಿಗೆ ವಿವಿಧ ಊರುಗಳಿಂದ ವಿದ್ಯಾರ್ಥಿಗಳು ಆಗಮಿಸುತ್ತಿದ್ದು, ಬಿಸಿಎ ವಿಭಾಗದ ಪ್ರವೇಶಾತಿ ಈಗಾಗಲೇ ಪೂರ್ಣಗೊಂಡಿದೆ. ಬಿಎ, ಬಿಕಾಂ ಹಾಗೂ ಬಿಎಸ್‌ಸಿ (ಸಿಎಸ್) ವಿಭಾಗಗಳಿಗೆ ಪ್ರವೇಶಾತಿ ಪ್ರಕ್ರಿಯೆ ಮುಂದುವರಿದಿದೆ ಎಂದು ಪ್ರಾಂಶುಪಾಲರು ತಿಳಿಸಿದ್ದಾರೆ.

### ತಪಸ್ವಿಗಳ ಸುರಕ್ಷತೆಗೆ ಪ್ರಧಾನಿ-ರಾಷ್ಟ್ರಪತಿಗೆ ಗದಗ ಜಿಲ್ಲಾ ಜೈನ್ ಸಮಾಜದ ತುರ್ತು ಮನವಿ

# ಹೆದ್ದಾರಿಯಲ್ಲಿ ಜೈನ ಮುನಿಗಳ ಜೀವಕ್ಕೆ ಕಂಟಕ!

■ವಿಜಯಸಾಕ್ಷಿ ಸುದ್ದಿ, ಗದಗ

ಜೈನ ಮುನಿಗಳು ಹಾಗೂ ಸಾಧ್ವಿಯರ ಮೇಲೆ ಇತ್ತೀಚೆಗೆ ಹೆಚ್ಚುತ್ತಿರುವ ರಸ್ತೆ ಅಪಘಾತಗಳಿಗೆ ತೀವ್ರ ಆತಂಕ ವ್ಯಕ್ತಪಡಿಸಿರುವ ಗದಗ ಜಿಲ್ಲಾ ಜೈನ್ ಸಮಾಜ, ಅಹಿಂಸೆಯ ಸಂದೇಶ ಹೊತ್ತು ದೇಶಾದ್ಯಂತ ಬರಿಗಾಲಿನಲ್ಲಿ ಪಾದಯಾತ್ರೆ ಮಾಡುವ ಜೈನ ತಪಸ್ವಿಗಳಿಗೆ ತಕ್ಷಣ ಸುರಕ್ಷತಾ ಕ್ರಮ ಕೈಗೊಳ್ಳಬೇಕು ಎಂದು ಆಗ್ರಹಿಸಿ ಪ್ರಧಾನಮಂತ್ರಿ ಹಾಗೂ ರಾಷ್ಟ್ರಪತಿಗೆ ಜಿಲ್ಲಾಧಿಕಾರಿಗಳ ಮೂಲಕ ಮನವಿ ಸಲ್ಲಿಸಿತು.

ನಗರದ ಗುಜ್ಜರ ಬಸ್ತಿಯಿಂದ ಶುಕ್ರವಾರ ಆರಂಭವಾದ ಶಾಂತ ಹಾಗೂ ಮೌನ ಬೃಹತ್ ಮೆರವಣಿಗೆ ನಗರದ ಪ್ರಮುಖ ಬೀದಿಗಳಲ್ಲಿ ಸಂಚರಿಸಿ ಜಿಲ್ಲಾಧಿಕಾರಿಗಳ ಕಚೇರಿಗೆ ತಲುಪಿತು. ಮೆರವಣಿಗೆಯಲ್ಲಿ ಜೈನ್ ಸಮಾಜದ ನೂರಾರು ಸದಸ್ಯರು ಭಾಗವಹಿಸಿ ತಪಸ್ವಿಗಳ ರಕ್ಷಣೆಗೆ ಸರ್ಕಾರ ಮಧ್ಯಪ್ರವೇಶಿಸಬೇಕು ಎಂದು ಒತ್ತಾಯಿಸಿದರು.

ಮನವಿಯಲ್ಲಿ, “ಶತಮಾನಗಳಿಂದ ಜೈನ ಸಾಧು-ಸಾಧ್ವಿಯರು ಅಹಿಂಸೆ, ಶಾಂತಿ ಹಾಗೂ ಆಧ್ಯಾತ್ಮಿಕ ಶಿಸ್ತಿನ ಸಂದೇಶದೊಂದಿಗೆ ದೇಶಾದ್ಯಂತ ಪಾದಯಾತ್ರೆ ನಡೆಸುತ್ತಿದ್ದಾರೆ. ಆದರೆ ಇಂದು ಹೆದ್ದಾರಿಗಳಲ್ಲೇ ಅವರ ಜೀವ ಅಪಾಯಕ್ಕೆ ಸಿಲುಕುತ್ತಿದೆ,” ಎಂದು ಆತಂಕ ವ್ಯಕ್ತಪಡಿಸಲಾಗಿದೆ.

ರಾಷ್ಟ್ರೀಯ ಹಾಗೂ ರಾಜ್ಯ ಹೆದ್ದಾರಿಗಳ ಪಕ್ಕದಲ್ಲಿ



ಜೈನ ತಪಸ್ವಿಗಳು, ಗ್ರಾಮೀಣರು ಹಾಗೂ ಕಾಲ್ನಡಿಗೆ ಪ್ರಯಾಣಿಕರಿಗಾಗಿ ಪ್ರತ್ಯೇಕ ಸುರಕ್ಷಿತ ಪಾದಚಾರಿ ಕಾರಿಡಾರ್ ನಿರ್ಮಿಸಬೇಕು ಎಂದು ಮನವಿಯಲ್ಲಿ ಆಗ್ರಹಿಸಲಾಗಿದೆ.

ಇದೇ ವೇಳೆ “ಸನ್ಯಾಸಿ ದಾಟುವಿಕೆ ವಲಯ” ಎಂಬ ಶಾಶ್ವತ ಎಚ್ಚರಿಕೆ ಫಲಕಗಳ ಅಳವಡಿಕೆ, ವಾಹನಗಳ ವೇಗ ನಿಯಂತ್ರಣ, ಅಪಘಾತ ಪ್ರಕರಣಗಳಲ್ಲಿ ನಿಷ್ಪಕ್ಷಪಾತ ತನಿಖೆ ಹಾಗೂ ತಪ್ಪಿತಸ್ಥರ ವಿರುದ್ಧ ಕಠಿಣ ಕ್ರಮ ಕೈಗೊಳ್ಳಬೇಕು ಎಂದು ಒತ್ತಾಯಿಸಲಾಗಿದೆ.

ಜೈನ ಮುನಿಗಳು ಹೆಚ್ಚಾಗಿ ವಿಹಾರ ಮಾಡುವ ಬೆಳಿಗ್ಗೆ 4ರಿಂದ 8 ಗಂಟೆ ಹಾಗೂ ಸಂಜೆ 5ರಿಂದ 6.30ರ ಅವಧಿಯಲ್ಲಿ ಹೆದ್ದಾರಿಗಳಲ್ಲಿ ವಿಶೇಷ ಪೊಲೀಸ್ ಗಸ್ತು ಹಾಗೂ ಮೇಲ್ವಿಚಾರಣೆ ಕೈಗೊಳ್ಳಬೇಕು ಎಂದು ಮನವಿಯಲ್ಲಿ ತಿಳಿಸಲಾಗಿದೆ.

ಆರ್‌ಟಿಓ ಮೂಲಕ ಚಾಲನಾ ಪರವಾನಗಿ ನೀಡುವ ಪ್ರಕ್ರಿಯೆಯಲ್ಲಿ “ಬರಿಗಾಲಿನ ತಪಸ್ವಿಗಳ ಸುರಕ್ಷತೆ” ಕುರಿತು ಜಾಗೃತಿ ಮಾಡ್ಯೂಲ್ ಸೇರಿಸಬೇಕೆಂದೂ ಆಗ್ರಹಿಸಲಾಗಿದೆ.

ಶ್ವೇತಾಂಬರ ಮೂರ್ತಿಪೂಜಕ ಸಮಾಜದ ಅಧ್ಯಕ್ಷ ಇಂದ್ರಕುಮಾರ ಬಾಫಣಾ, ವರ್ಧಮಾನ ಸ್ಥಾನಕವಾಸಿ ಸಮಾಜದ ಅಧ್ಯಕ್ಷ ರೂಪಚಂದಜೀ ಪಾಲರೇಚಾ, ತೇರಾಪಂಥ ಸಮಾಜದ ಅಧ್ಯಕ್ಷ ಖೀಮಚಂದ ಬನ್ಸಾಲಿ, ಕೆಡಿಒ ಜೈನ್ ಮಹಾಜನ್ ಸಮಾಜದ ಅಧ್ಯಕ್ಷ ವಿಜಯ ಲೂಥಿಯಾ, ದಿಗಂಬರ ಜೈನ್ ಸಮಾಜದ ಅಧ್ಯಕ್ಷ ಪದ್ಮರಾಜ ಕುಲಕರ್ಣಿ ಸೇರಿದಂತೆ ಸಮಾಜದ ಮುಖಂಡರು, ಮಹಿಳಾ ಹಾಗೂ ಯುವಕ ಮಂಡಳದ ಪದಾಧಿಕಾರಿಗಳು ಉಪಸ್ಥಿತರಿದ್ದರು.

ಮನವಿ ಸ್ವೀಕರಿಸಿದ ಜಿಲ್ಲಾಧಿಕಾರಿ ಸಿ.ಎನ್. ಶ್ರೀಧರ, ಸರ್ಕಾರಕ್ಕೆ ರವಾನಿಸಿ ಅಗತ್ಯ ಕ್ರಮ ಕೈಗೊಳ್ಳಲಾಗುವುದು ಎಂದು ಭರವಸೆ ನೀಡಿದರು.

**ಪ್ರಮುಖ ಬೇಡಿಕೆಗಳು**

1. ಜೈನ ಮುನಿಗಳಿಗಾಗಿ ಸುರಕ್ಷಿತ ಪಾದಚಾರಿ ಕಾರಿಡಾರ್ ನಿರ್ಮಾಣ
2. “ಸನ್ಯಾಸಿ ದಾಟುವಿಕೆ ವಲಯ” ಎಚ್ಚರಿಕೆ ಫಲಕ ಅಳವಡಿಕೆ
3. ಹೆದ್ದಾರಿಗಳಲ್ಲಿ ವೇಗ ನಿಯಂತ್ರಣ ಕ್ರಮ
4. ಅಪಘಾತ ಪ್ರಕರಣಗಳಲ್ಲಿ ನಿಷ್ಪಕ್ಷಪಾತ ತನಿಖೆ
5. ವಿಶೇಷ ಪೊಲೀಸ್ ಗಸ್ತು ವ್ಯವಸ್ಥೆ
6. ಚಾಲನಾ ಪರವಾನಗಿಯಲ್ಲಿ ಜಾಗೃತಿ ಮಾಡ್ಯೂಲ್ ಸೇರ್ಪಡೆ

### ವಿಶ್ವ ಪರಿಸರ ದಿನಾಚರಣೆ ಅಂಗವಾಗಿ ವಿದ್ಯಾರ್ಥಿಗಳಿಗೆ ಗಿಡ ವಿತರಣೆ, ಚಿತ್ರಕಲಾ ಸ್ಪರ್ಧೆ

# ಪ್ರಕೃತಿ ಮುನಿದರೆ ಮಾನವ ಸಂಕುಲವೇ ಸರ್ವನಾಶ!

■ವಿಜಯಸಾಕ್ಷಿ ಸುದ್ದಿ, ಗದಗ

“ಪ್ರಕೃತಿಯ ಮಹತ್ವ ಅರಿಯದೆ ಮಾನವನ ದುರಾಸೆಯಿಂದ ಪರಿಸರ ನಾಶವಾಗುತ್ತಿದೆ. ಪ್ರಕೃತಿ ಉಳಿದರೆ ಮಾತ್ರ ಭವಿಷ್ಯ ಸುರಕ್ಷಿತ. ಇಲ್ಲದಿದ್ದರೆ ಪ್ರಕೃತಿ ಮುನಿದರೆ ಮಾನವ ಸಂಕುಲವೇ ಸರ್ವನಾಶವಾಗುತ್ತದೆ” ಎಂದು ಸಾಮಾಜಿಕ ಅರಣ್ಯ ಇಲಾಖೆಯ ವಲಯ ಅರಣ್ಯಾಧಿಕಾರಿ ನಮನ ನಾರಾಯಣ ನಾಯಕ ಎಚ್ಚರಿಸಿದರು.

ನಗರದ ಸಿದ್ಧಲಿಂಗ ನಗರ ಸರ್ಕಾರಿ ಪ್ರೌಢಶಾಲೆಯಲ್ಲಿ ಸಾಮಾಜಿಕ ಅರಣ್ಯ ಇಲಾಖೆ ಹಾಗೂ ವಿಜಯವಾಣಿ ಸಹಯೋಗದಲ್ಲಿ ಹಮ್ಮಿಕೊಂಡಿದ್ದ ವಿಶ್ವ ಪರಿಸರ ದಿನಾಚರಣೆ, ಗಿಡ ನೆಡುವ ಕಾರ್ಯಕ್ರಮ, ಗಿಡ ವಿತರಣೆ ಹಾಗೂ ಚಿತ್ರಕಲಾ ಸ್ಪರ್ಧೆಯನ್ನು ಉದ್ಘಾಟಿಸಿ ಅವರು ಮಾತನಾಡಿದರು.

ಜಾಗತಿಕ ತಾಪಮಾನ ಏರಿಕೆ, ಅರಣ್ಯ ನಾಶ, ನೀರಿನ ಕೊರತೆ, ವಾಯುಮಾಲಿನ್ಯ ಹಾಗೂ ಜೀವ



ವೈವಿಧ್ಯ ಕುಸಿತ ಜಗತ್ತಿನಾದ್ಯಂತ ಆತಂಕ ಸೃಷ್ಟಿಸಿದೆ. ಅತಿಯಾದ ಅಭಿವೃದ್ಧಿ ಚಟುವಟಿಕೆಗಳಿಂದ ಪ್ರಕೃತಿಯ ಸಮತೋಲನ ಹಾಳಾಗುತ್ತಿದೆ ಎಂದು ಅವರು ಕಳವಳ ವ್ಯಕ್ತಪಡಿಸಿದರು.

ಪ್ಲಾಸ್ಟಿಕ್ ಬಳಕೆ, ಅರಣ್ಯ ನಾಶ, ಕೈಗಾರಿಕಾ ತ್ಯಾಜ್ಯ, ವಾಹನಗಳ ಹೊಗೆ ಹಾಗೂ ನೀರಿನ ದುರ್ಬಳಕೆ ಪರಿಸರ ಮಾಲಿನ್ಯದ ಪ್ರಮುಖ ಕಾರಣಗಳಾಗಿವೆ. ಗ್ರಾಮೀಣ ಪ್ರದೇಶಗಳಲ್ಲಿ ಕೆರೆಗಳ ಒತ್ತುವರಿ, ಮರ ಕಡಿತ ಹಾಗೂ ತ್ಯಾಜ್ಯ ವಿಲೇವಾರಿ ಸಮಸ್ಯೆಗಳು ಹೆಚ್ಚಾಗುತ್ತಿವೆ ಎಂದು ಹೇಳಿದರು.

> “ಪರಿಸರ ಉಳಿದರೆ ಮಾತ್ರ ನಾವು ನೆಮ್ಮದಿಯ ಬದುಕು ನಡೆಸಲು ಸಾಧ್ಯ. ಪ್ರಕೃತಿಯನ್ನು ಕಾಪಾಡುವುದು ಪ್ರತಿಯೊಬ್ಬರ ಹೊಣೆಗಾರಿಕೆ.”
> – ನಮನ ನಾರಾಯಣ ನಾಯಕ, ವಲಯ ಅರಣ್ಯಾಧಿಕಾರಿಯುವಕ.

ಮುಖ್ಯ ಅತಿಥಿಯಾಗಿ ಭಾಗವಹಿಸಿದ್ದ ಸಹಾಯಕ ಅರಣ್ಯ ಸಂರಕ್ಷಣಾಧಿಕಾರಿ ಪ್ರಕಾಶ್ ಪವಾಡಿಗೌಡರ ಮಾತನಾಡಿ, “ಪರಿಸರವೆಂದರೆ ಕೇವಲ ಮರಗಳು ಅಥವಾ ನದಿಗಳು ಅಲ್ಲ. ಗಾಳಿ, ನೀರು, ಮಣ್ಣು, ಸಸ್ಯಗಳು ಹಾಗೂ ಜೀವಜಗತ್ತಿನ ಸಮಗ್ರ ವ್ಯವಸ್ಥೆಯಾಗಿದೆ. ಈ ವ್ಯವಸ್ಥೆಯ ಅಸಮತೋಲನ ಮಾನವನ ಬದುಕಿನ ಮೇಲೆಯೇ ಪರಿಣಾಮ ಬೀರುತ್ತದೆ,” ಎಂದರು.

ಇತ್ತೀಚಿನ ವರ್ಷಗಳಲ್ಲಿ ಅತಿವೃಷ್ಟಿ, ಅನಾವೃಷ್ಟಿ, ಭೂಕುಸಿತ, ಉಷ್ಣಾಂಶ ಏರಿಕೆ ಹಾಗೂ ಹವಾಮಾನ ವೈಪರಿತ್ಯಗಳು ಹೆಚ್ಚುತ್ತಿರುವುದು ಪರಿಸರ ಹಾನಿಯ ಸ್ಪಷ್ಟ ಸೂಚನೆಯಾಗಿದೆ ಎಂದು ಹೇಳಿದರು.

ಶಿಕ್ಷಣ ತಜ್ಞ ಡಾ. ಬಸವರಾಜ ಧಾರವಾಡ ಮಾತನಾಡಿ, “ಪರಿಸರ ಸಂರಕ್ಷಣೆಯಲ್ಲಿ ಸಾರ್ವಜನಿಕರ ಪಾತ್ರ ಅತ್ಯಂತ ಮಹತ್ವದ್ದು. ಪ್ರತಿಯೊಬ್ಬರೂ ಕನಿಷ್ಠ ಒಂದು ಗಿಡ ನೆಟ್ಟು ಅದರ ಪೋಷಣೆ ಮಾಡಬೇಕು. ಪ್ಲಾಸ್ಟಿಕ್ ಬಳಕೆ ಕಡಿಮೆ ಮಾಡಿ ಮಳೆ ನೀರು ಸಂಗ್ರಹಣೆ, ಕಸ ವಿಂಗಡಣೆ ಹಾಗೂ ಮರುಬಳಕೆ ಪದ್ಧತಿಗಳನ್ನು ಅಳವಡಿಸಿಕೊಳ್ಳಬೇಕು,” ಎಂದು ಸಲಹೆ ನೀಡಿದರು.

ಕಾರ್ಯಕ್ರಮದಲ್ಲಿ ಶಾಲಾ ಆವರಣದಲ್ಲಿ ಗಣ್ಯರಿಂದ ಗಿಡ ನೆಡಲಾಯಿತು. ವಿದ್ಯಾರ್ಥಿಗಳಿಗೆ ಗಿಡಗಳನ್ನು ವಿತರಿಸಲಾಗಿದ್ದು, ಚಿತ್ರಕಲಾ ಸ್ಪರ್ಧೆ ಏರ್ಪಡಿಸಿ ವಿಜೇತರಿಗೆ ನಗದು ಬಹುಮಾನ ಹಾಗೂ ಅಭಿನಂದನಾ ಪತ್ರ ನೀಡಿ ಗೌರವಿಸಲಾಯಿತು.



ಗದಗ: ನಗರದ ಸಿದ್ಧಗಂಗಾ ನಗರದಲ್ಲಿರುವ ಶ್ರೀದುರ್ಗಾಪರ್ಮೇಶ್ವರಿ ದೇವಸ್ಥಾನದಲ್ಲಿ ಅಧಿಕ ಮಾಸದ ಪ್ರಯುಕ್ತ ಮಹಿಳೆಯರಿಗೆ ಉಡಿ ತುಂಬುವ ಧಾರ್ಮಿಕ ಕಾರ್ಯಕ್ರಮ ಭಕ್ತಿಭಾವದಿಂದ ನೆರವೇರಿಸಲಾಯಿತು.

ಕಾರ್ಯಕ್ರಮದಲ್ಲಿ ಸುಮಂಗಲಿಯರು ದೇವಿಗೆ ವಿಶೇಷ ಪೂಜೆ ಸಲ್ಲಿಸಿ, ಉಡಿ ತುಂಬುವ ಸಂಪ್ರದಾಯವನ್ನು ಆಚರಿಸಿದರು. ದೇವಸ್ಥಾನದಲ್ಲಿ ಧಾರ್ಮಿಕ ವಾತಾವರಣ ನಿರ್ಮಾಣವಾಗಿದ್ದು, ಭಕ್ತರು ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸಿ ದೇವಿಯ ಆಶೀರ್ವಾದ ಪಡೆದರು. ಈ ಸಂದರ್ಭದಲ್ಲಿ ದೇವಸ್ಥಾನದ ಪದಾಧಿಕಾರಿಗಳು, ಮಹಿಳಾ ಭಕ್ತರು ಹಾಗೂ ಸ್ಥಳೀಯರು ಉಪಸ್ಥಿತರಿದ್ದರು.

### ಕಾಯಕ ನಿಧಿ ಯೋಜನೆಯಡಿ ಎಪಿಎಮ್‌ಸಿಯಿಂದ ₹25 ಸಾವಿರ ಚೆಕ್ ವಿತರಣೆ

# ಹಮಾಲಿ ಕಾರ್ಮಿಕನ ಅಗಲಿಕೆಗೆ ಕಂಬನಿ

■ವಿಜಯಸಾಕ್ಷಿ ಸುದ್ದಿ, ಗದಗ

ದುಡಿಮೆಯನ್ನೇ ಬದುಕಿನ ಧರ್ಮವೆಂದು ನಂಬಿ ಗದಗ ಎಪಿಎಂಸಿಯಲ್ಲಿ ಹಮಾಲಿ ಕಾರ್ಮಿಕನಾಗಿ ಸೇವೆ ಸಲ್ಲಿಸುತ್ತಿದ್ದ ಅಬ್ದುಲ್‌ರಜಾಕ್ ಪೆಂಡಾರಿ ಅವರು ಕರ್ತವ್ಯ ನಿರ್ವಹಿಸುತ್ತಿದ್ದ ವೇಳೆ ಅನಾರೋಗ್ಯಕ್ಕೀಡಾಗಿ ನಿಧನರಾಗಿದ್ದು, ಅವರ ಕುಟುಂಬಕ್ಕೆ ಗದಗ ಎಪಿಎಂಸಿ ಆಡಳಿತ ಮಂಡಳಿ ಮಾನವೀಯ ನೆರವಿನ ಹಸ್ತ ಚಾಚಿದೆ.

ಕೃಷಿ ಮಾರಾಟ ಇಲಾಖೆಯ ‘ಕಾಯಕ ನಿಧಿ ಯೋಜನೆ’ಯಡಿ ₹25 ಸಾವಿರ ಪರಿಹಾರದ ಚೆಕ್ ಅನ್ನು ಎಪಿಎಂಸಿ ಕಾರ್ಯದರ್ಶಿ ಶ್ರೀಮತಿ ಸುವರ್ಣಾ ವಾಲಿಕಾರ ಹಾಗೂ ಸಹ ಕಾರ್ಯದರ್ಶಿ ಎಂ.ಆರ್. ನದಾಫ್ ಅವರು ಮೃತರ ಸಹೋದರ ಮಾಬುಸಾಬ ಪೆಂಡಾರಿ ಅವರಿಗೆ ಹಸ್ತಾಂತರಿಸಿ ಕುಟುಂಬಕ್ಕೆ ಸಾಂತ್ವನ ಹೇಳಿದರು.

ಇದೇ ವೇಳೆ ಗದಗ-ಬೆಟಗೇರಿ ಜನರಲ್ ವರ್ಕರ್ಸ್ ಹಮಾಲರು ಮತ್ತು ಚಕ್ಕಡಿಯವರ ಸಮಿತಿಯೂ ಮೃತ ಕಾರ್ಮಿಕನ ಕುಟುಂಬದ ನೆರವಿಗೆ ಧಾವಿಸಿದೆ. ಸಮಿತಿಯ ಅಧ್ಯಕ್ಷ ಆದಪ್ಪ ಮಾರೆಪ್ಪ ಮಾರೆಪ್ಪನವರ ನೇತೃತ್ವದಲ್ಲಿ ಅಂತ್ಯಸಂಸ್ಕಾರ ವೆಚ್ಚಕ್ಕಾಗಿ ₹10 ಸಾವಿರ ಧನಸಹಾಯ ನೀಡಿ ಮಾನವೀಯತೆ ಮೆರೆದರು.

ಪರವಾನಗಿ ಪಡೆದ ಹಮಾಲಿ ಕಾರ್ಮಿಕರ ಸಂಕಷ್ಟದ ಸಂದರ್ಭದಲ್ಲಿ ನೆರವಾಗುವ ಉದ್ದೇಶದಿಂದ ಕೃಷಿ ಮಾರಾಟ ಇಲಾಖೆ ಜಾರಿಗೆ ತಂದಿರುವ ‘ಕಾಯಕ ನಿಧಿ ಯೋಜನೆ’ ಕಾರ್ಮಿಕ ಕುಟುಂಬಗಳಿಗೆ ನಿಜವಾದ ಆಸರೆಯಾಗುತ್ತಿದೆ ಎಂದು ಅಧಿಕಾರಿಗಳು ತಿಳಿಸಿದರು.

ಈ ಸಂದರ್ಭದಲ್ಲಿ ಗದಗ-ಬೆಟಗೇರಿ ಜನರಲ್



ವರ್ಕರ್ಸ್ ಹಮಾಲರು ಮತ್ತು ಚಕ್ಕಡಿಯವರ ಸಮಿತಿಯ ಕಾರ್ಯದರ್ಶಿ ಇಮಾಮಸಾಬ ದಾವಲಸಾಬ ರೋಣದ, ಖಜಾಂಚಿ ಶಂಕ್ರಪ್ಪ ಯರಗುಡಿ, ಸದಸ್ಯರಾದ ಹುಸೇನಸಾಬ ವಡವಿ, ಬಸವರಾಜ ಸೂಡಿ, ಇಮಾಮಹುಸೇನ ರೋಣದ, ದೇವರಾಜ ಬಿನ್ನಾಳ, ಫಕ್ರುಸಾಬ ಘಟ್ಟದ ಸೇರಿದಂತೆ ಹಲವು ಹಮಾಲಿ ಬಂಧುಗಳು ಉಪಸ್ಥಿತರಿದ್ದು, ಅಗಲಿದ ಸಹೋದ್ಯೋಗಿಗೆ ಭಾವಪೂರ್ಣ ಶ್ರದ್ಧಾಂಜಲಿ ಸಲ್ಲಿಸಿದರು.

# ಶುದ್ಧ ಗಾಳಿಗೆ ಕಪ್ಪತ್ತಗುಡ್ಡವೇ ಕಾರಣ

■ವಿಜಯಸಾಕ್ಷಿ ಸುದ್ದಿ, ಗದಗ

ನಗರದ ಜಗದ್ಗುರು ತೋಂಟದಾರ್ಯ ವಿದ್ಯಾಪೀಠದ ತೋಂಟದ ಸಿದ್ದೇಶ್ವರ ಪದವಿ ಪೂರ್ವ ಕಾಲೇಜ್‌ನಲ್ಲಿ ವಿಶ್ವ ಪರಿಸರ ದಿನಾಚರಣೆಯನ್ನು ವಿಜೃಂಭಣೆಯಿಂದ ಆಚರಿಸಲಾಯಿತು.

ಕಾರ್ಯಕ್ರಮವನ್ನು ಕಾಲೇಜಿನ ಪ್ರಾಚಾರ್ಯ ವಾಯ್.ಎಸ್. ಮತ್ತೂರ ಅವರು ಸಸಿಗಳಿಗೆ ನೀರೆರೆಯುವ



ಮೂಲಕ ಉದ್ಘಾಟಿಸಿದರು.

ನಂತರ ಮಾತನಾಡಿದ ಅವರು, “ಏಷ್ಯಾದಲ್ಲೇ ಅತ್ಯಂತ ಶುದ್ಧ ಗಾಳಿ ಇರುವ ಪ್ರದೇಶಗಳಲ್ಲಿ ಗದಗ ಸುತ್ತಮುತ್ತಲಿನ ಪರಿಸರವೂ ಒಂದು. ಇದಕ್ಕೆ ಪ್ರಮುಖ ಕಾರಣ ಕಪ್ಪತ್ತಗುಡ್ಡ. ಕಪ್ಪತ್ತಗುಡ್ಡವನ್ನು ಖಾಸಗಿ ಕಂಪನಿಗಳಿಂದ ನಾಶವಾಗದಂತೆ ಹಗಲು-ರಾತ್ರಿ ಉಪವಾಸ ಸತ್ಯಾಗ್ರಹ ನಡೆಸಿ ಸಂರಕ್ಷಿಸಿದ ಕೀರ್ತಿ ಪರಮಪೂಜ್ಯ ಡಾ. ತೋಂಟದ ಸಿದ್ಧಲಿಂಗ ಸ್ವಾಮೀಜಿಗಳಿಗೆ ಸಲ್ಲುತ್ತದೆ,” ಎಂದು ಹೇಳಿದರು.

“ಭೂಮಿಯನ್ನು ತಾಯಿಯಂತೆ ಗೌರವಿಸುವುದು ಹಾಗೂ ಪರಿಸರ ಸಂರಕ್ಷಣೆ ಪ್ರತಿಯೊಬ್ಬರ ಜವಾಬ್ದಾರಿಯಾಗಿದೆ. ನಾವೆಲ್ಲರೂ ಪರಿಸರ ಉಳಿವಿಗಾಗಿ ಕೈಜೋಡಿಸಬೇಕು,” ಎಂದು ವಿದ್ಯಾರ್ಥಿಗಳಿಗೆ ಕರೆ ನೀಡಿದರು.

ಈ ಸಂದರ್ಭದಲ್ಲಿ ಕಾಲೇಜಿನ ಆವರಣದಲ್ಲಿ ವಿದ್ಯಾರ್ಥಿಗಳು ಹಾಗೂ ಉಪನ್ಯಾಸಕರು ಸಸಿ ನೆಟ್ಟು ಪರಿಸರ ಕಾಳಜಿ ಅಭಿಯಾನಕ್ಕೆ ಕೈಜೋಡಿಸಿದರು.

### ಗದಗದಲ್ಲಿ ಕ್ರಿಯಾ ಯೋಜನೆ ತರಬೇತಿ; ತ್ಯಾಜ್ಯದಿಂದ ಇಂಧನ ಉತ್ಪಾದನೆಗೆ ಒತ್ತು

# ಹವಾಮಾನ ಬದಲಾವಣೆಗೆ ಸಜ್ಜಾಗಬೇಕು

■ವಿಜಯಸಾಕ್ಷಿ ಸುದ್ದಿ, ಗದಗ

ಹವಾಮಾನ ಬದಲಾವಣೆಯ ಸವಾಲುಗಳನ್ನು ಎದುರಿಸಲು ಜಿಲ್ಲಾಮಟ್ಟದಲ್ಲಿ ಸಮಗ್ರ ಕ್ರಿಯಾ ಯೋಜನೆ ರೂಪಿಸಿ ಕಾರ್ಯಕ್ಷಮತೆ ವರದಿ ಸಿದ್ಧಪಡಿಸಬೇಕು ಎಂದು ಪರಿಸರ ನಿರ್ವಹಣೆ ಮತ್ತು ನೀತಿ ಸಂಶೋಧನಾ ಸಂಸ್ಥೆ (ಎಂಪ್ರಿ) ಹಿರಿಯ ಸಮಾಲೋಚಕಿ ಡಾ. ಸರಿತಾ ಅಧಿಕಾರಿಗಳಿಗೆ ಸಲಹೆ ನೀಡಿದರು.

ನಗರದ ಜಿಲ್ಲಾ ಪಂಚಾಯತ್ ಸಭಾಂಗಣದಲ್ಲಿ ಕರ್ನಾಟಕ ರಾಜ್ಯ ಹವಾಮಾನ ಬದಲಾವಣೆ ಕುರಿತು ಕ್ರಿಯಾ ಯೋಜನೆ ತರಬೇತಿ ಕಾರ್ಯಕ್ರಮ ಉದ್ಘಾಟಿಸಿ ಅವರು ಮಾತನಾಡಿದರು. ಹವಾಮಾನ ಬದಲಾವಣೆಯ ಇಲಾಖಾ ಕ್ರಿಯಾ ಯೋಜನೆಗಳ ಕಾರ್ಯಕ್ಷಮತೆ ಸೂಚಕಗಳನ್ನು ಅಧಿಕಾರಿಗಳು ಸಮರ್ಪಕವಾಗಿ ಅರ್ಥಮಾಡಿಕೊಳ್ಳಬೇಕು. ಗದಗ ಜಿಲ್ಲೆಗೆ ಸಂಬಂಧಿಸಿದ ವರದಿಯನ್ನು



ಪರಿಣಾಮಕಾರಿಯಾಗಿ ಸಿದ್ಧಪಡಿಸಲು ಎಲ್ಲ ಇಲಾಖೆಗಳು ಸಮನ್ವಯದಿಂದ ಕಾರ್ಯನಿರ್ವಹಿಸಬೇಕು ಎಂದು ಹೇಳಿದರು.

ಹೊಸ ತಂತ್ರಜ್ಞಾನ ಬಳಸಿ ತ್ಯಾಜ್ಯ ನಿರ್ವಹಣೆ, ತ್ಯಾಜ್ಯದಿಂದ ಇಂಧನ ಉತ್ಪಾದನೆ, ನದಿ-ಕೆರೆಗಳ ನೀರಿನ ಗುಣಮಟ್ಟ ಕಾಪಾಡುವುದು ಹಾಗೂ ಮಾಲಿನ್ಯ ನಿಯಂತ್ರಣಕ್ಕೆ ಹೆಚ್ಚಿನ ಆದ್ಯತೆ ನೀಡಬೇಕು ಎಂದು ತಿಳಿಸಿದರು.

ಹವಾಮಾನ ಬದಲಾವಣೆ ಹಾಗೂ ಕರ್ನಾಟಕ ರಾಜ್ಯ ಕ್ರಿಯಾ ಯೋಜನೆ ಕುರಿತು ಸುದೀರ್ಘ ಮಾಹಿತಿ ನೀಡಿದ ಡಾ. ಸರಿತಾ, ವಿವಿಧ ಇಲಾಖೆಗಳು ಹಾಗೂ ಸಂಘ-ಸಂಸ್ಥೆಗಳ ಜವಾಬ್ದಾರಿಗಳನ್ನು ವಿವರಿಸಿದರು.

ವಿಷಯ ತಜ್ಞ ಶಶಿಕುಮಾರ್ ಜಲ ಸಂಪನ್ಮೂಲ ವಲಯದ ಹವಾಮಾನ ಕ್ರಿಯಾ ಯೋಜನೆ ಕುರಿತು ಮಾಹಿತಿ ನೀಡಿದರು.

> “ಹವಾಮಾನ ಬದಲಾವಣೆಯ ಸವಾಲು ಎದುರಿಸಲು ತ್ಯಾಜ್ಯ ನಿರ್ವಹಣೆ, ಹಸಿರು ಇಂಧನ ಬಳಕೆ ಹಾಗೂ ಪರಿಸರ ಸಂರಕ್ಷಣೆಗೆ ಆದ್ಯತೆ ನೀಡಬೇಕು.”
> **–ಡಾ. ಸರಿತಾ,** ಹಿರಿಯ ಸಮಾಲೋಚಕಿ, ಎಂಪ್ರಿ ಬೆಂಗಳೂರು

ಗದಗ ಜಿಲ್ಲೆಯ ಎನ್‌ಆರ್‌ಡಿಎಂಎಸ್ ಅಧಿಕಾರಿ ಮಂಜುನಾಥ್, ಎನ್‌ಆರ್‌ಡಿಎಂಎಸ್ ಕೇಂದ್ರದ ಕಾರ್ಯಚಟುವಟಿಕೆಗಳ ಕುರಿತು ವಿವರಿಸಿದರು.

ಕಾರ್ಯಕ್ರಮದಲ್ಲಿ ವಿವಿಧ ಇಲಾಖೆಗಳ ಜಿಲ್ಲಾ ಮಟ್ಟದ ಅಧಿಕಾರಿಗಳು, ಸಂಘ-ಸಂಸ್ಥೆಗಳ ಪ್ರತಿನಿಧಿಗಳು ಹಾಗೂ ಶಿಕ್ಷಣ ಸಂಸ್ಥೆಗಳ ಸಿಬ್ಬಂದಿ ಭಾಗವಹಿಸಿದ್ದರು.

ಕರ್ನಾಟಕ ಸರ್ಕಾರ
**ಪಟ್ಟಣ ಪಂಚಾಯತ ಕಾರ್ಯಾಲಯ ಮುಳಗುಂದ**
ತಾ॥ ಜಿ॥ ಗದಗ
ಸಂ:ಪಪಂಮು/ತಾಂ.ವಿ./ಎಸ್.ಬಿ.ಎಂ./ಟೆಂಡರ್/ವಹಿ-/2026-27
ದಿನಾಂಕ: 06-06-2026
**ಅಲ್ಪಾವಧಿ ಟೆಂಡರ್ ಪ್ರಕಟಣೆ ಕರ್ನಾಟಕ ಪಬ್ಲಿಕ್ ಪ್ರೋಕ್ಯೂರಮೆಂಟ್ ಮೂಲಕ**

ಮುಖ್ಯಾಧಿಕಾರಿಗಳು ಪಟ್ಟಣ ಪಂಚಾಯತ ಮುಳಗುಂದ ಇವರಿಂದ ಮುಳಗುಂದ ಪಟ್ಟಣ ಪಂಚಾಯತ ವ್ಯಾಪ್ತಿಯಲ್ಲಿ ಕರ್ನಾಟಕ ಪಾರದರ್ಶಕತೆ ಅಧಿನಿಯಮ-2000ರ ಪ್ರಕಾರ “ಕರ್ನಾಟಕ ಪಬ್ಲಿಕ್ ಪ್ರೋಕ್ಯೂರಮೆಂಟ್ ಪೋರ್ಟಲ್” ಪದ್ಧತಿಯಲ್ಲಿ ಸ್ವಚ್ಛ ಭಾರತ ಮಿಷನ್ (ನಗರ) ಯೋಜನೆಯಡಿ **ಇಂಡೆಂಟ ನಂಬರಗಳ ಸಂಖ್ಯೆಗಳು-DMA/2026-27/SE7843/CALL-2** ನೇದ್ದರ ಕಾಮಗಾರಿಗಳ ನಿರ್ವಹಣೆಗಾಗಿ ಕೆ.ಡಬ್ಲ್ಯೂ.1/2/3 ದಸ್ತಾವೇಜನಲ್ಲಿ ಕರ್ನಾಟಕ ಪಬ್ಲಿಕ್ ಪ್ರೋಕ್ಯೂರಮೆಂಟ್ ಪೋರ್ಟಲ್‌ನಲ್ಲಿ ನೊಂದಾಯಿಸಲ್ಪಟ್ಟ ಮತ್ತು ಲೋಕೋಪಯೋಗಿ ಇಲಾಖೆಯಲ್ಲಿ ನೊಂದಾಯಿತ ಚಾಲ್ತಿ ಸಾಲಿನ ಅರ್ಹ ಏಜೆನ್ಸಿ/ಗುತ್ತಿಗೆದಾರರಿಂದ ಟೆಂಡರ್‌ನ್ನು ಆಹ್ವಾನಿಸಲಾಗಿದೆ. ಇ-ಪ್ರೋಕ್ಯೂರಮೆಂಟ ದಾಖಲೆಗಳಿಗಾಗಿ **http://kppp.karnataka.gov.in** ರ ಮೂಲಕ ಕೆಳಗೆ ನಮೂದಿಸಿರುವ ದಿನಾಂಕದಂದು ಆನ್‌ಲೈನ್ ಮೂಲಕವೇ ಟೆಂಡರ್ ಸಲ್ಲಿಸುವದು.

1. ಇ-ಪ್ರೋಕ್ಯೂರಮೆಂಟ್ ಪದ್ಧತಿಯಲ್ಲಿ ಟೆಂಡರ್ ಸಲ್ಲಿಸುವ ಕೊನೆಯ **ದಿನಾಂಕ: 16-06-2026 ಸಂಜೆ: 16.00 ಗಂಟೆಗೆ**
2. ಇ-ಪ್ರೋಕ್ಯೂರಮೆಂಟ್ ಪದ್ಧತಿಯಲ್ಲಿ ಆರ್ಥಿಕ ಬಿಡ್ ತೆರೆಯುವ **ದಿನಾಂಕ: 17-06-2026 ಸಂಜೆ: 16:30 ಗಂಟೆಗೆ**

ನಿಗದಿಪಡಿಸಿದ ದಿನಾಂಕಗಳು ಒಂದು ವೇಳೆ ರಜಾ ದಿನಗಳನ್ನಾಗಿ ಘೋಷಿಸಲ್ಪಟ್ಟರೆ ಮುಂದಿನ ದಿನಾಂಕವನ್ನು ಪರಿಗಣಿಸಲಾಗುವದು. ಯಾವುದೇ ತಿದ್ದುಪಡಿಗಳನ್ನು ಪತ್ರಿಕೆಗಳಲ್ಲಿ ಪ್ರಕಟಿಸಲಾಗುವುದಿಲ್ಲ.

ಈ ಕಚೇರಿಯಲ್ಲಿ ಯಾವುದೇ ಅರ್ಜಿಗಳನ್ನು ಸ್ವೀಕರಿಸಲಾಗುವುದಿಲ್ಲಾ ಕಾಮಗಾರಿ ಇ.ಎಂ.ಡಿ. ಪೂರ್ಣಗೊಳಿಸುವ ಅವಧಿ, ಗುತ್ತಿಗೆದಾರರ ದರ್ಜೆ ಹಾಗೂ ಇನ್ನಿತರ ಹೆಚ್ಚಿನ ಮಾಹಿತಿ ಹಾಗೂ ಷರತ್ತುಗಳಿಗೆ ಕಚೇರಿಯ ವೆಬ್‌ಸೈಟ್ **http://www.mulagundatown.mrc.gov.in** ಹಾಗೂ ಕಚೇರಿ ವೇಳೆಯಲ್ಲಿ ಸಂಭಂಧಿಸಿದ ಶಾಖೆಯಲ್ಲಿ ಮಾಹಿತಿಯನ್ನು ಪಡೆಯಬಹುದು. ಇ-ಪೋರ್ಟಲ್‌ನ ಎಲ್ಲ ಷರತ್ತುಗಳು ಅನ್ವಯಿಸುತ್ತವೆ. ಹಾಗೂ ಟೆಂಡರ್ ಮಂಜೂರ ವ ನಾಮಂಜೂರ ಮಾಡುವ ಅಧಿಕಾರವನ್ನು ಪಟ್ಟಣ ಪಂಚಾಯತ ಕಾಯ್ದಿರಿಸಿಕೊಂಡಿದೆ.

ಸಹಿ/-
(ಶ್ರೀ ಮಂಜುನಾಥ ಪಿ. ಗುಳೇದ)
ಮುಖ್ಯಾಧಿಕಾರಿ
ಪಟ್ಟಣ ಪಂಚಾಯತ ಮುಳಗುಂದ

ಸಹಿ/-
(ಶ್ರೀ ಶ್ರೀನಿವಾಸ ಮೂರ್ತಿ ಕುಲಕರ್ಣಿ)
ಆಡಳಿತಾಧಿಕಾರಿಗಳು
ಪಟ್ಟಣ ಪಂಚಾಯತ ಮುಳಗುಂದ
ತಹಶೀಲ್ದಾರ ಹಾಗೂ ತಾಲೂಕಾ ದಂಡಾಧಿಕಾರಿಗಳು
ಗದಗ

ವಾ.ಸಾ.ಇ./ಗದಗ/105/ದೇಶಪಾಂಡೆಪಬ್ಲಿಸಿಟಿ/2026-27

VIJAYA SAKSHI KANNADA DAILY MORNING Editor, Printer, Publisher, & Owned by : Hussainsab M. Shareefanavar, H.No. 130/154, Balaji Nagar, Near Ring Road, Gadag-582103, Dist : Gadag- Karnataka Printed at : Sai Printing Press, Near Joda Maruti Temple, Gadag-582101, Dist : Gadag- Karnataka